ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 139

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶನಿವಾರ: 09–05–2026


## ಕಾಂಗ್ರೆಸ್ ಪಕ್ಷವೆಂಬುದು ಅನುಭವ ಮಂಟಪ:ಎಂಬಿಪಿ



**ವಿಜಯಪುರ, ಮೇ. 8:** ಕಾಂಗ್ರೆಸ್ ಪಕ್ಷವೆಂಬುದು ಅನುಭವ ಮಂಟಪ. ಈ ಅನುಭವ ಮಂಟಪದಲ್ಲಿ ಎಲ್ಲ ಜಾತಿ–ಜನಾಂಗಗಳಿಗೆ ಸಮಸ್ಥಾನ. ಆ ಸಾಮಾಜಿಕ ಹಿನ್ನಲೆಯನ್ನು ಅನುಸರಿಸಿ ಬಹಳಷ್ಟು ಹಿಂದುಳಿದ ಸಮಾಜಗಳು ಇಂದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಳ್ಳುತ್ತಿದ್ದಾರೆ. ಈ ಕಾರ್ಯ ಮುಂದುವರೆದಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜಗಳು ಕಾಂಗ್ರೆಸ್ ಪಕ್ಷದ ತೆಕ್ಕೆಗೆ ಬರಲಿವೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಗುರುವಾರ ವಿಜಯಪುರ ನಗರದ ಗೃಹ ಕಚೇರಿಯಲ್ಲಿ ತಿಕೋಟಾ ಪಟ್ಟಣದ ತಳವಾರ ಸಮುದಾಯದ ನಾನಾ ಮುಖಂಡರನ್ನು ಕಾಂಗ್ರೆಸ್ಸಿಗೆ ಬರಮಾಡಿಕೊಂಡು ಅವರು ಮಾತನಾಡಿದರು.
ಮತಕ್ಷೇತ್ರದಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಯೋಜನೆಗಳು ಸಕಲ ಸಮುದಾಯಗಳ ಮೆಚ್ಚುಗೆಗೆ ಪಾತ್ರವಾಗಿದ್ದು, ತಿಕೋಟಾ ತಳವಾರ ಸಮುದಾಯದ ಪ್ರಮುಖ ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗಿರುವುದು ಇದಕ್ಕೆ ಸಾಕ್ಷಿಯಾಗಿದೆ. ಬಬಲೇಶ್ವರ ಮತಕ್ಷೇತ್ರದಲ್ಲಿ ಇಂದು ರಾಜಕೀಯ ಚಿತ್ರಣವೇ ಬದಲಾಗಿದೆ. ನುಡಿದಂತೆ ನಡೆಯುವ ನಮ್ಮ ಗ್ಯಾರಂಟಿ ಸರಕಾರದ ಜನಪರ ಆಡಳಿತಕ್ಕೆ ಮನಸೋತು, ಬಿಜೆಪಿಯ ಪ್ರಮುಖರು, ಕಾರ್ಯಕರ್ತರು ತಮ್ಮ ಪಕ್ಷಕ್ಕೆ ಗುಡ್ ಬೈ ಹೇಳಿ ಕಾಂಗ್ರೆಸ್ ಗೆ ಜೈ ಎಂದಿದ್ದಾರೆ. ನಮ್ಮ ಅಭಿವೃದ್ಧಿಯ ಹಾದಿ ಮತ್ತು ಗಟ್ಟಿಯಾದ ಸಿದ್ಧಾಂತವನ್ನು ನಂಬಿ ಬಂದ ಈ ಎಲ್ಲಾ ನಾಯಕರನ್ನು ಆತ್ಮೀಯವಾಗಿ ಸ್ವಾಗತಿಸುತ್ತೇನೆ. ಅವರ ಸೇರ್ಪಡೆಯಿಂದ ಕಾಂಗ್ರೆಸ್ ಪಕ್ಷಕ್ಕೆ ಮತ್ತಷ್ಟು ಬಲ ಬಂದಿದೆ. ಮುಂಬರುವ ದಿನಗಳಲ್ಲಿ ಅವರ ಬೇಡಿಕೆಗಳಿಗೆ ಸ್ಪಂದಿಸಲಾಗುವುದು ಎಂದು ಸಚಿವರು ತಿಳಿಸಿದರು.
ಈ ಸಂದರ್ಭದಲ್ಲಿ ಮುಖಂಡರಾದ ಸುರೇಶ ತೊರವಿ, ಎಚ್. ಎಲ್. ತಳವಾರ, ಪರಶುರಾಮ ಕೋಳಿ, ಗಣಪತಿ ತೋರವಿ, ಅಪ್ಪಸಾಹೇಬ ಡ್ಯಾಬೇರಿ, ದಯಾನಂದ ಶಿರಹಟ್ಟಿ ಪ್ರಕಾಶ ಹಾಲಳ್ಳಿ, ಭೀಮು ಹಾಲಳ್ಳಿ, ರಮೇಶ ಗುಡದಿನ್ನಿ, ವಿಲಾಸ ಮಾಳಿ, ನಾಗಪ್ಪ ಮಾಳಿ, ಶಾಂತಾಭಾಯಿ ತಳವಾರ, ಗೀತಾ ತೋರವ, ಪುಷ್ಪಾ ತೋರವಿ, ಮಂಗಲಾ ತಳವಾರ, ಮನಿಷಾ ತಳವಾರ, ಕವಿತಾ ಹಾಲಳ್ಳಿ ಸೇರಿದಂತೆ ನೂರಾರು ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.
ಈ ವೇಳೆ ಮುಖಂಡರಾದ ಬಿ. ಜಿ. ವಿಭೂತಿ, ಜೆ. ಎಂ. ಪಾಟೀಲ, ಮಮ್ಮು ಮುಜಾವರ, ಬಾಪು ಚೌಧರಿ, ರಾಜೂಗೌಡ ಪಾಟೀಲ, ಬಿ. ಎಲ್. ನಾಟೀಕಾರ ಮುಂತಾದವರು ಉಪಸ್ಥಿತರಿದ್ದರು.

## ಐಪಿಎಲ್ ಫೈನಲ್ ಸ್ಥಳ ಬದಲಾವಣೆ : ಗೃಹ ಸಚಿವ ಪರಮೇಶ್ವರ್ ಆಕ್ರೋಶ



**ಬೆಂಗಳೂರು, ಮೇ 8–** ಸವಾಲಿನ ಸಂದರ್ಭದಲ್ಲೂ ಬೇಂಗಳೂರಿನಲ್ಲಿ ಐಪಿಎಲ್ ಪಂದ್ಯಗಳ ಆಟಕ್ಕೆ ಅವಕಾಶ ನೀಡಿ ಹೆಚ್ಚು ಕಾಳಜಿವಹಿಸಿ ಭದ್ರತೆ ಒದಗಿಸಲಾಗಿತ್ತು. ಅಂತಹ ಸಂದರ್ಭದಲ್ಲೂ ಫೈನಲ್ ಪಂದ್ಯಾವಳಿಯನ್ನು ಗುಜರಾತಿಗೆ ಸ್ಥಳಾಂತರಿಸುವುದು ಸರಿಯಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಶಾಸಕರು ಟಿಕೆಟ್ ಕೇಳಿದ್ದಕ್ಕಾಗಿ ಪಂದ್ಯಾವಳಿಯನ್ನು ಸ್ಥಳಾಂತರಿಸಲಾಗಿದೆ ಎಂದು ಮಾಡುತ್ತಿರುವ ಆರೋಪ ಆಧಾರ ರಹಿತ. ಈ ಬಗ್ಗೆ ಐಪಿಎಲ್ ಅಥವಾ ಕೆಸಿಎ ಸಂಸ್ಥೆಯವರು ನೇರವಾಗಿ ಹೇಳಿಕೆ ನೀಡಲಿ ಎಂದು ಸವಾಲು ಹಾಕಿದರು.

ಬಿಸಿಸಿಐ, ಕೆಸಿಎ ಮತ್ತು ಆರ್‌ಸಿಬಿ ಸಂಸ್ಥೆಗಳ ನಡುವೆ ಆಗಿರುವ ಒಪ್ಪಂದಗಳ ಬಗ್ಗೆ ತಮಗೆ ಮಾಹಿತಿ ಇಲ್ಲ. ಆದರೆ ಐಪಿಎಲ್ ಪಂದ್ಯಾವಳಿಯನ್ನು ಲಾಭದ ಆಸೆಯಿಂದ ನೋಡಲಾಗುತ್ತಿದೆ. ಬೆಂಗಳೂರಿನ ಕ್ರಿಡಾಂಗಣದಲ್ಲಿ 33 ಸಾವಿರ 2ನೇಪುಟಕ್ಕೆ

## ಸಕಾಲದಲ್ಲಿ ಮಾಹಿತಿ ನೀಡದ ಅಧಿಕಾರಿಗಳಿಗೆ ದಂಡ ವಿಧಿಸಲಾಗಿದೆ– ಬಿ. ವೆಂಕಟಸಿಂಗ್



ಧೈರ್ಯದ ದಾರಿ

**ರಾಯಚೂರು ಮೇ.8.:** ಸಕಾಲಕ್ಕೆ ಮಾಹಿತಿ ನೀಡಲು ನಿರ್ಲಕ್ಷ್ಯ ವಹಿಸುವುದು ಸೇರಿದಂತೆ ವಿಚಾರಣೆಗೆ ಗೈರು ಹಾಜರಾಗಿ ಆಯೋಗದ ನೋಟಿಸ ಗೆ ಸ್ಪಂದನೆ ನೀಡದ ಕಾರಣ ಕಲ್ಬುರ್ಗಿ ಜಿಲ್ಲಾ ಪಂಚಾಯತ ಉಪ ಕಾರ್ಯ ದರ್ಶಿ ಲಕ್ಷ್ಮಣ ಶೃಂಗೇರಿ, ಹಾಗೂ ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯ ಪಾಲಾನಾ ಅಭಿಯಂತರ ದೇವಣ್ಣ ಕಟ್ಟಿ, ರಾಯಚೂರು ತಾಲೂಕು ಗ್ರೇಡ್ – 2 ತಹಸೀಲ್ದಾರ್ ಪರಶುರಾಮ್ ಸೇರಿ ಹಲವು ಗ್ರಾ.ಪಂ. ಅಭಿವೃದ್ಧಿ ಅಧಿಕಾರಿಗಳಿಗೆ ಹಾಗೂ ಗ್ರಾಮ ಪಂಚಾಯತ ಕಾರ್ಯದರ್ಶಿಗಳಿಗೆ ರಾಜ್ಯ ಮಾಹಿತಿ ಆಯೋಗದ ಕಲ್ಬುರ್ಗಿ ಪೀಠ ದಿಂದ ದಂಡ ವಿಧಿಸಿ ಆದೇಶ ಮಾಡಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ತಿಳಿಸಿದ್ದಾರೆ.

ಏಪ್ರಿಲ್ ತಿಂಗಳಿನಲ್ಲಿ ನಡೆದ ವಿಚಾರಣೆ ವೇಳೆ ಗೈರು ಹಾಜರಾಗಿದ್ದಲ್ಲದೆ, ಮಾಹಿತಿ ನೀಡದ ಕಾರಣ ಕಲ್ಬುರ್ಗಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶ್ರೀ ಲಕ್ಷ್ಮಣ ಶೃಂಗೇರಿಗೆ 10 ಸಾವಿರ, ಗಂಗಾವತಿ ತಾಲೂಕು ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಶ್ರೀ ದೇವಣ್ಣ ಕಟ್ಟಿಗೆ 15 ಸಾವಿರ,ರಾಯಚೂರು ತಾಲೂಕು ಗ್ರೇಡ್ 2 ತಹಸೀಲ್ದಾರ್ ಪರಶುರಾಮ ಗೆ 5 ಸಾವಿರ,ಜೇವರ್ಗಿ ತಾಲೂಕಿನ ಹುಲ್ಲೂರ ಗ್ರಾ.ಪಂ ಕಾರ್ಯದರ್ಶಿ ಮಲ್ಲಿಕಾರ್ಜುನಗೆ 5 ಸಾವಿರ, ಸುರುಪುರ ತಾಲೂಕಿನ ಆಲ್ದಾಳ ಗ್ರಾ.ಪಂ. ಕಾರ್ಯದರ್ಶಿ ರಾಜಕುಮಾರ ಸುಬೆದಾರಗೆ 10 ಸಾವಿರ, ಮಟ್ಟಿ ತಾಲೂಕಿನ ಆರೋಲಿ ಗ್ರಾಪಂ ಪಿ.ಡಿ.ಓ ರಘುನಾಥಗೆ 5 ಸಾವಿರ, ಆಳಂದ ತಾಲೂಕಿನ ಯಲಸಂಗಿ ಗ್ರಾ.ಪಂ ಪಿ.ಡಿ.ಓ ಜಗದೀಶಗೆ 15 ಸಾವಿರ, ಸುರಪುರ ತಾಲೂಕಿನ ನಗನೂರು ಗ್ರಾಪಂ ಕಾರ್ಯದರ್ಶಿಯಾದ ಮಡಿವಾಳಪ್ಪಗೆ 10 ಸಾವಿರ, ಶಹಪುರ ತಾಲೂಕಿನ ಗೋಗಿ.ಕೆ. ಗ್ರಾ.ಪಂ. ಪಿ.ಡಿ.ಓ. ಸಿದ್ರಾಮಗೆ 10 ಸಾವಿರ, ಸಂಡೂರು ತಾಲೂಕಿನ ಹೊಸದರೋಜ ಗ್ರಾಪಂ ಕಾರ್ಯದರ್ಶಿ ಕಲ್ಲಪ್ಪಗೆ 10 ಸಾವಿರ, ಯಾದಗಿರ ತಾಲೂಕಿನ ಸೈದಾಪುರ ಗ್ರಾ.ಪಂ ಪಿ.ಡಿ.ಓ ಮುದುಕಪ್ಪಗೆ 10 ಸಾವಿರ, ವಡಗೇರಾ ತಾಲೂಕಿನ ತಡಿಬಿಡಿ ಗ್ರಾ.ಪಂ. ಕಾರ್ಯದರ್ಶಿ ಯಂಕನಗೌಡಗೆ 5 ಸಾವಿರ, ಕಾರಟಗಿ ತಾಲೂಕಿನ ಸಿದ್ದಾಪುರ ಗ್ರಾಪಂ ಕಾರ್ಯದರ್ಶಿ ಶ್ರೀಮತಿ ಜೋತಿ ರೆಡ್ಡರ್ಗೆ 10 ಸಆವಿರ ಕಲ್ಬುರ್ಗಿ ತಾಲೂಕಿನ ಹಾಗಾರಗ ಗ್ರಾ.ಪಂ. ಕಾರ್ಯದರ್ಶಿ ವೇದಾಂಗಗೆ 5 ಸಾವಿರ, ಲಿಂಗಸೂಗೂರು ತಾಲೂಕಿನ ಪೈದೊಡ್ಡಿ ಗ್ರಾ.ಪಂ.ನ ಕಾರ್ಯದರ್ಶಿ ಭೀಮಣ್ಣಗೆ 10 ಸಾವಿರ, ಯಾದಗಿರ ತಾಲೂಕಿನ ರಾಮ ಸಮುದ್ರ ಗ್ರಾ.ಪಂ. ಕಾರ್ಯದರ್ಶಿ ಗಾಲಿಬಸಾಬ ಗೆ 5 ಸಾವಿರ ಹಾಗೂ ರಾಯಚೂರು ತಾಲೂಕಿನ ಗ್ರೇಡ್–2 ತಹಶೀಲದಾರ ಪರುಶುರಾಮಗೆ 5 ಸಾವಿರ ಸೇರಿ ಒಟ್ಟು 18 ಅಧಿಕಾರಿಗಳಿಗೆ ಏಪ್ರೀಲ್ ತಿಂಗಳಿನಲ್ಲಿ 1 ಲಕ್ಷ 50 ಸಾವಿರ ದಂಡ ವಿಧಿಸಲಾಗಿದೆ ಎಂದು ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಏಪ್ರೀಲ್ ತಿಂಗಳಲ್ಲಿ 564 ಪ್ರಕರಣಗಳು ವಿಚಾರಣೆಗೆ ಕೈಗೆತ್ತಿಕೊಂಡು 229 ಪ್ರಕರಣಗಳು ವಿಲೇವಾರಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ತಾವು ಅಧಿಕಾರ ಸ್ವೀಕರಿಸಿದ ಬಳಿಕ ಒಟ್ಟು 3,084 ಪ್ರಕರಣಗಳು ಕೈಗೆತ್ತಿಕೊಂಡು 88 ದಿನ ವಿಚಾರಣೆ ನಡೆಸಿ 1,308 ಪ್ರಕರಣಗಳು ವಿಲೇವಾರಿ ಮಾಡಿರುವುದಾಗಿ ಆಯುಕ್ತರಾದ ಬಿ.ವೆಂಕಟಸಿಂಗ್ ತಿಳಿಸಿದ್ದಾರೆ. ಪ್ರಕರಣಗಳ ತ್ವರಿತ ವಿಲೇವಾರಿಗೆ ಅನೂಕೂಲವಾಗಲು ಅಧಿಕಾರಿಗಳಿಗೆ ಮಾಹಿತಿ ಹಕ್ಕು ಅಧಿನಿಯಮ ಕುರಿತು ಅರಿವು ಮುಡಿಸಲು ಈಗಾಗಲೇ ಬಳ್ಳಾರಿ, ಬೀದರ್, ಕಲ್ಬುರ್ಗಿ ಹಾಗೂ ಕೊಪ್ಪಳದಲ್ಲಿ ಕಾರ್ಯಗಾರ ನಡೆಸಿದ್ದು ಈ ತಿಂಗಳ 30 ರಂದು ವಿಜಯನಗರ ಜಿಲ್ಲೆಯಲ್ಲಿ ಕಾರ್ಯಗಾರ ಹಮ್ಮಿಕೊಂಡಿರುವುದಾಗಿ ತಿಳಿಸಿದ್ದಾರೆ.

## ಭಾರತದಲ್ಲಿ ದಾಳಿಗೆ ಸಂಚು ರೂಪಿಸಿದ್ದ ಪಾಕಿಸ್ತಾನದ ಐಎಸ್‌ಐ



**ನವದೆಹಲಿ, ಮೇ 8–** ಇಲ್ಲಿನ ಐತಿಹಾಸಿಕ ದೇವಾಲಯ, ದೆಹಲಿ–ಸೋನಿಪತ್ ಹೆದ್ದಾರಿಯಲ್ಲಿರುವ ಜನಪ್ರಿಯ ಧಾಬಾ ಮತ್ತು ಹರಿಯಾಣದ ಮಿಲಿಟರಿ ಶಿಬಿರದ ಮೇಲೆ ದಾಳಿ ನಡೆಸಲು ಶಹಜಾದ್ ಭಟ್ಟಿ ಮಾಡ್ಯೂಲ್‌ಗೆ ಸಂಬಂಧಿಸಿದ ಕಾರ್ಯಕರ್ತರ ಮೂಲಕಪಾಕಿಸ್ತಾನದ ಗುಪ್ತಚರ ಸಂಸ್ಥೆ ಐಎಸ್‌ಐ ಸಂಚು ರೂಪಿಸಿತ್ತು ಎಂದು ಮೂಲಗಳು ತಿಳಿಸಿವೆ.

ದೆಹಲಿ ಪೊಲೀಸ್ ವಿಶೇಷ ಘಟಕವು ಗ್ಯಾಂಗ್ ಬಸ್ಟ್ ಆಪರೇಷನ್ 2.0 ಅಡಿಯಲ್ಲಿ ಬಹು ರಾಜ್ಯಗಳಿಂದ ಬಂಧಿಸಿರುವ ಮಾಡ್ಯೂಲ್‌ನ ಒಂಬತ್ತು ಆರೋಪಿಗಳ ವಿಚಾರಣೆಯ ಸಮಯದಲ್ಲಿ ಈ ವಿಷಯ ಬಹಿರಂಗಗೊಂಡಿದೆ.ಆರೋಪಿಗಳಲ್ಲಿ ಒಬ್ಬರು ದೆಹಲಿಯ ಐತಿಹಾಸಿಕ ದೇವಾಲಯದ ವಿಚಕ್ಷಣ ನಡೆಸಿದ್ದರು ಮತ್ತು ಸಾಮಾಜಿಕ ಮಾಧ್ಯಮ ವೇದಿಕೆಗಳ ಮೂಲಕ ಪಾಕಿಸ್ತಾನ ಮೂಲದ ನಿರ್ವಾಹಕರಿಗೆ ಆವರಣದ ಛಾಯಾಚಿತ್ರಗಳನ್ನು ಕಳುಹಿಸಿದ್ದರು ಎಂದು ತನಿಖಾಧಿಕಾರಿಗಳು ಕಂಡುಕೊಂಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ದೇವಾಲಯದಲ್ಲಿ ನಿಯೋಜಿಸಲಾದ ಪೊಲೀಸ್ ಸಿಬ್ಬಂದಿ ಮತ್ತು ಅರೆಸೈನಿಕ ಪಡೆಗಳನ್ನು ಗುರಿಯಾಗಿಸಿಕೊಂಡು ಭಯ ಮತ್ತು ಅಸ್ತವ್ಯಸ್ತತೆಯನ್ನು ಸೃಷ್ಟಿಸಲು ಗುಂಡು ಹಾರಿಸಲು ಮಾಡ್ಯೂಲ್ ಯೋಜಿಸಿತ್ತು ಎಂದು ಅವರು ಹೇಳಿದರು.

ದೆಹಲಿ–ಸೋನಿಪತ್ ಹೆದ್ದಾರಿಯಲ್ಲಿರುವ ಜನಪ್ರಿಯ ಧಾಬಾದಲ್ಲಿ ಪ್ರತಿದಿನ ಸಾವಿರಾರು ಜನರು ಓಡಾಡುತ್ತಿದ್ದು, ದೊಡ್ಡ ಪ್ರಮಾಣದ ಹಾನಿ ಮತ್ತು ಸಾವುನೋವುಗಳನ್ನು ಉಂಟುಮಾಡುವ ಉದ್ದೇಶದಿಂದ ಗ್ರೆನೇಡ್ ದಾಳಿ ನಡೆಸುವ ಕೆಲಸವನ್ನು ಆರೋಪಿಗಳಿಗೆ ವಹಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಹಿಸಾರ್‌ನಲ್ಲಿರುವ ಮಿಲಿಟರಿ ಶಿಬಿರವನ್ನು ಸಹ ಸಮೀಕ್ಷೆ ಮಾಡಲಾಗಿದೆ ಮತ್ತು ಆ ಪ್ರದೇಶದ ವೀಡಿಯೊಗಳನ್ನು ಗಡಿಯುದ್ದಕ್ಕೂ ಇರುವ ನಿರ್ವಾಹಕರೊಂದಿಗೆ ಹಂಚಿಕೊಳ್ಳಲಾಗಿದೆ. ಉತ್ತರ ಪ್ರದೇಶದ ಕೆಲವು ಪೊಲೀಸ್ ಠಾಣೆಗಳು ಸಹ ಗುರಿ ಪಟ್ಟಿಯಲ್ಲಿವೆ ಎಂದು ಮೂಲಗಳು ತಿಳಿಸಿವೆ.

## ವಾಲ್ಮೀಕಿ ವಿವಿ ಸ.ಪ್ರಾಧ್ಯಾಪಕರ ನೇಮಕಾತಿಗೆ ಹೈಕೋರ್ಟ್ ತಡೆ




ಧೈರ್ಯದ ದಾರಿ

**ರಾಯಚೂರು:** ಸಮೀಪದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ 24 ಸಹಾಯಕ ಪ್ರಾಧ್ಯಾಪಕ ಹುದ್ದೆಗಳ ನೇಮಕಾತಿಗೆ ಕಲಬುರಗಿ ಹೈಕೋರ್ಟ್ ಪೀಠ ಮಧ್ಯಂತರ ತಡೆಯಾಜ್ಞೆ ನೀಡಿ ಆದೇಶ ಹೊರಡಿಸಿದೆ. ವಿವಿಯ ಸಹಾಯಕ ಪ್ರಾಧ್ಯಾಪಕ ಹುದ್ದೆಗಳಿಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಕಳೆದ ಏ.14ರಂದು ಮಂಜೂರಾತಿಗೆ ಆದೇಶ ನೀಡಿ, ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರವು ಮಾರ್ಗಸೂಚಿಗಳನ್ನು ನಿಗದಿಪಡಿಸಿತ್ತು, ಆದರೆ ಮಾರ್ಗಸೂಚಿಗಳು ಯುಜಿಸಿಯ ನಿಯಮಾವಳಿಗಳನ್ನು ಉಲ್ಲಂಘಿಸಿವೆ ಎಂದು ಸ್ಪರ್ಧಾಕಾಂಕ್ಷಿಗಳು ಆಕ್ಷೇಪ ವ್ಯಕ್ತಪಡಿಸಿ ಹೈ ಕೋರ್ಟ್ ಮೊರೆ ಹೋಗಿದ್ದರು. ಅರ್ಜಿ ವಿಚಾರಣೆ ಕೈಗೊಂಡ ನ್ಯಾಯಾಲಯವು ನೇಮಕಾತಿ ಪ್ರಕ್ರಿಯೆಗೆ ಮುಂದಿನ ಆದೇಶದವರೆಗೆ ತಡೆ ನೀಡಿ ಮಧ್ಯಂತರ ಆದೇಶವನ್ನು ಹೊರಡಿಸಿದೆ.

## ಪಟ್ಟಣದಲ್ಲಿ 70 ಕೋಟಿ ವೆಚ್ಚದಲ್ಲಿ ಶಾಶ್ವತ ಕುಡಿಯುವ ನೀರಿನ ಕಾಮಗಾರಿ : ಅಬ್ದುಲ್ ಗಾಫೂರ್ ಸಾಬ್




ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಭಾರತ ಜೋಡೊ ಭವನದಲ್ಲಿ ನಗರಯೋಜನಪ್ರಾಧಿಕಾರ ಅಧ್ಯಕ್ಷರು ಹಾಗೂ ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷರಾದ ಅಬ್ದುಲ್ ಗಾಫೂರ್ ಸಾಬ್ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿ ಪಟ್ಟಣದಲ್ಲಿ ಬೇಸಿಗೆ ಅಂಗವಾಗಿ ಪಟ್ಟಣದ 27 ವಾರ್ಡಗಳಲ್ಲಿನ ಜನರಿಗೆ ಅಗತ್ಯವಿರುವ ಕುಡಿಯುವ ನೀರಿನ ಪೂರೈಕೆಗಾಗಿ ಪುರಸಭೆಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಅಗತ್ಯ ಇರುವ ಕಡೆ ಟ್ಯಾಂಕರ್ ಮೂಲಕ ಕೂಡ ನೀರು ಪೂರೈಕೆ ಮಾಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಹಾಗೂ ಶಾಸಕ ಹಂಪಯ್ಯನಾಯಕ ರವರು ಮಾನ್ವಿ ಪಟ್ಟಣಕ್ಕೆ ಶಾಶ್ವತ ಕುಡಿಯುವ ನೀರಿಗಾಗಿ 70 ಕೋಟಿ ವೆಚ್ಚದಲ್ಲಿ ಅಮೃತ –2 ಯೋಜನೆಯನ್ನು ಮಂಜೂರು ಮಾಡಿಸಿದು ಕಾಮಗಾರಿ ಕೂಡ ಪ್ರಗತಿಯಲ್ಲಿದು ಪೈಪ್ ಲೈನ್ ಕಾಮಗಾರಿ ವೇಗವಾಗಿ ನಡೆಯುತ್ತಿದೆ. ಎ.ಪಿ.ಎಂ.ಸಿ. ಅವರಣದಲ್ಲಿ 12.5 ಲಕ್ಷ ಲೀ ಸಂಗ್ರಹಣ ಸಾಮಾರ್ಥ್ಯದ ಟ್ಯಾಂಕ್ ಹಾಗೂ ಜಯನಗರದಲ್ಲಿ 7.5 ಲಕ್ಷ ಲೀ ಸಂಗ್ರಹಣ ಸಾಮಾರ್ಥ್ಯದ ಟ್ಯಾಂಕ್ ನಿರ್ಮಾಣ ಕಾಮಗಾರಿ ನಡೆಯುತ್ತಿದೆ.
ರಬ್ಬಣಕಲ್ ಕೆರೆಯಲ್ಲಿ 7.5 ಮೀಟರ್ ನೀರನ್ನು ಸಂಗ್ರಹಿಸಲಾಗಿದೆ. ಕಾತರಕಿ ಜಾಕವೇಲ್‌ನಲ್ಲಿ ಕೂಡ ಯಂತ್ರಗಳನ್ನು ಹಾಕಲಾಗುತ್ತಿದೆ. ಪೈಪ್ ಲೈನ್ ಹಾಗೂ ವಾಲ್‌ಗಳ ದುರಸ್ಥಿ ಕೈಗೊಳ್ಳಲಾಗುತ್ತಿದೆ. ಜುಮ್ಮಲದೊಡ್ಡಿ ಸಿಲ್ವಾರ್ ಜ್ಯೂಬಲಿ ಟ್ಯಾಂಕ್ ನಿಂದ 5 ವಾರ್ಡಗಳಿಗೆ ಸಂಪರ್ಕ ಪೈಪ್ ಲೈನ್ ಹಾಕಲಾಗುತ್ತಿದೆ. ಪುರಸಭೆಯಿಂದ ಬೇಸಿಗೆಯಲ್ಲಿ ನೀರಿನ ತೊಂದರೆ ಇದ್ದರು ಕೂಡ ವಾರ್ಡಗಳಿಗೆ 5 ದಿನಗಳಿಗೊಮ್ಮೆ ನೀರನ್ನು ಬಿಡಲಾಗುತ್ತಿದೆ.

ಮುಂದಿನ ದಿನಗಳಲ್ಲಿ ಅಮೃತ –2 ಯೋಜನೆ ಪೂರ್ಣಗೊಳಿಸಿ ನಿರಂತರವಾಗಿ ನೀರು ಪೂರೈಕೆಗೆಅಗತ್ಯ ಕ್ರಮ ಕೈಗೊಳ್ಳಲಾಗುವುದು ಅದ್ದರು ಕೂಡ ಕೆಲವರು ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ರವರ ವಿರುದ್ದ ಸಾಮಾಜಿಕ ಜಾಲತಾಣಗಳಲ್ಲಿ ಅಪಪ್ರಚಾರ ಹಾಗೂ ಸುಳ್ಳು ಮಾಹಿತಿಯನ್ನು ನೀಡುವ ಮೂಲಕ ಜನರಲ್ಲಿ ಗೊಂದಲ ಮೂಡಿಸಿತಿದ್ದು ,ಸಚಿವ ಎನ್.ಎಸ್.ಬೋಸರಾಜು ರವರ ಗೌರವಕ್ಕೆದಕ್ಕೆ ತರುವ ಕೆಲಸವನ್ನು ಮಾಡುತ್ತಿದ್ದಾರೆ ಅಂತಹವರ ವಿರುದ್ದ ಕಾನೂನು ತಜ್ಞರ ಜೋತೆ ಸಮಾಲೋಚಿಸಿ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.
ತಾ.ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ ಇದ್ದರು.

## ಹೊಂಡಕ್ಕೆ ಬಿದ್ದು ವಿದ್ಯಾರ್ಥಿ ಸಾವು : ಪರಿಹಾರಕ್ಕೆ ಆಗ್ರಹಿಸಿ ಶವವಿಟ್ಟು ಪ್ರತಿಭಟನೆ



**ವಾಡಿ, ಮೆ.8 –** ರೈಲ್ವೆ ಕಾಮಗಾರಿಗಾಗಿ ಮಣ್ಣು ತೆಗೆದಿದ್ದ ಹೊಂಡಕ್ಕೆ ಬಿದ್ದು ವಿದ್ಯಾರ್ಥಿಯೋರ್ವ ಸಾವನ್ನಪ್ಪಿದ ಘಟನೆ ಚಿತ್ತಾಪುರ ತಾಲ್ಲೂಕಿನ ಲಾಡ್ಲಾಪುರ ಗ್ರಾಪಂ ವ್ಯಾಪ್ತಿಯ ಕೊಂಚೂರು ಡಿಗ್ಗಿತಾಂಡಾದಲ್ಲಿ ಬುಧವಾರ ಮಧ್ಯಾಹ್ನ ಜರುಗಿದೆ.
6ನೇ ತರಗತಿ ವಿದ್ಯಾರ್ಥಿ ರಿತೇಶ ತಂದೆ ನಾರಾಯಣ (13) ಮೃತ ದುರ್ದೈವಿ.
ಇನ್ನಷ್ಟು ಅನ್ವೇಷಿಸಿ

ತಾಂಡಾದಿಂದ 1 ಕಿಮೀ ದೂರದಲ್ಲಿ ರೈಲ್ವೆ ಹಳಿ ಪಕ್ಕ ಮಣ್ಣು ತೆಗೆದು ಗುಂಡಿ ಹಾಗೇ ಬಿಡಲಾಗಿದೆ. ಮಳೆ ನೀರು ನಿಂತಿದ್ದರಿಂದ ಹಲವು ಮಕ್ಕಳು ಬೇಸಿಗೆ ಬಿಸಿಲ ಕಾರಣಕ್ಕಾಗಿ ಈಜಲು ತೆರಳಿದ್ದರು. ಅವರ ಜತೆ ಹೋಗಿದ್ದ ಬಾಲಕ ಮೊಳಕಾಲುದ್ದ ನೀರಿಗೆ ಇಳಿದಿದ್ದಾನೆ. ನಂತರ ಆಳ ಇದ್ದ ತಗ್ಗಿನ ಕಡೆ ಹೋಗಿದ್ದರಿಂದ ಮೇಲೆ ಬರಲು ಸಾಧ್ಯವಾಗದೆ ಮುಳುಗಿ ಉಸಿರುಗಟ್ಟಿ ಮೃತಪಟ್ಟಿದ್ದಾನೆ. ಇದರಿಂದ ಗಾಬರಿಗೊಂಡ ಅಲ್ಲಿನ ಮಕ್ಕಳು ಓಡಿ ಹೋಗಿ ತಾಂಡಾ ನಿವಾಸಿಗಳಿಗೆ ಸುದ್ದಿ ಮುಟ್ಟಿಸಿದ್ದಾರೆ. ನೀರಿಗಿಳಿದ ಕೆಲವರು ಬಾಲಕನನ್ನು ಹೊರಗೆ ತೆಗೆಯುವಷ್ಟರಲ್ಲಿ ಪ್ರಾಣ ಹೋಗಿದೆ. ವಾಡಿ ಠಾಣೆಯಲ್ಲಿ ದೂರು ದಾಖಲಾಗಿದೆ. 2ನೇಪುಟಕ್ಕೆ►

## ಬಸ್‌ಗಳ ನಡುವೆ ಡಿಕ್ಕಿ ಪ್ರಯಾಣಿಕರಿಗೆ ಗಾಯ



**ಕಲಬುರಗಿ,ಮೇ.8–** ಎರಡು ಕೆಎಸ್ ಅರ್‌ಟಿಸಿ ಬಸ್‌ಗಳ ನಡುವೆ ಮುಖಾ ಮುಖಿ ಡಿಕ್ಕಿ ಸಂಭವಿಸಿ ಹಲವು ಪ್ರಯಾಣಿಕರು ಗಾಯಗೊಂಡಿರುವ ಘಟನೆ ನಗರದ ಹೊರವಲಯದ ಸಿರನೂರು ಬಳಿ ಗುರುವಾರ ನಡೆದಿದೆ.ಜೇವರ್ಗಿ ಕಡೆಯಿಂದ ಕಲಬುರಗಿಗೆ ಬರುತ್ತಿದ್ದ ಬಸ್ ಹಾಗೂ ಕಲಬುರಗಿಯಿಂದ ಹೊರಟಿದ್ದ ಮತ್ತೊಂದು ಬಸ್ ನಡುವೆ ಈ ಅಪಘಾತ ಸಂಭವಿಸಿದೆ.ಬಸ್ ಚಾಲಕನೊಬ್ಬ ಕಾರೊಂದನ್ನು ಓವರ್‌ಟೇಕ್ ಮಾಡಲು ಪ್ರಯತ್ನಿಸಿದಾಗ ಎದುರಿನಿಂದ ಬರುತ್ತಿದ್ದ ಬಸ್‌ಗೆ ಡಿಕ್ಕಿ ಹೊಡೆದಿದೆ ಎನ್ನಲಾಗಿದೆ. ಡಿಕ್ಕಿಯ ರಭಸಕ್ಕೆ ಒಂದು ಬಸ್‌ನ ಮುಂಭಾಗದ ಗಾಜು ಸಂಪೂರ್ಣ ಪುಡಿಪುಡಿಯಾಗಿದ್ದು, ಇನ್ನೊಂದು ಬಸ್ ಗಾಜು ಭಾಗಶ: ನಜ್ಜುಗುಜ್ಜಾಗಿದೆ.

ಮೊದಲನೇ ಪುಟದಿಂದ

# ಐಪಿಎಲ್ ಫೈನಲ್ ಸ್ಥಳ ಬದಲಾವಣೆ : ಗೃಹ ಸಚಿವ ಪರಮೇಶ್ವರ್ ಆಕ್ರೋಶ

ಆಸನಗಳಲ್ಲಿ ಒಂದಿಷ್ಟು ಉಚಿತ ಟಿಕೆಟ್‌ಗಳು ಹೋಗುತ್ತಿವೆ ಎಂಬುದನ್ನು ಹೊರತು ಪಡಿಸಿದರೆ, ಭದ್ರತೆ ಅಥವಾ ವ್ಯವಸ್ಥೆಗಳಲ್ಲಾಗಲೀ ಯಾವುದೇ ಲೋಪವಿಲ್ಲ. ನಮ ಪೊಲೀಸ್ ಇಲಾಖೆ ಎಲ್ಲಾ ರೀತಿಯ ಸಹಕಾರ ನೀಡಿದೆ. ಈ ಹಿಂದಿನ ವರ್ಷದಂತೆ ದುರಂತಗಳು ನಡೆಯಬಾರದು ಎಂದು ಹೆಚ್ಚಿನ ಕಾಳಜಿ ವಹಿಸಲಾಗಿತ್ತು ಎಂದರು.

ಐಪಿಎಲ್ ಪಂದ್ಯಾವಳಿಗಳು ಬೆಂಗಳೂರಿನಿಂದ ಸ್ಥಳಾಂತರವಾಗಬಾರದು ಎಂಬ ಕಾರಣಕ್ಕಾಗಿ ಸಂಕಷ್ಟದ ಸಂದರ್ಭದಲ್ಲೂ ಅನುಮತಿ ನೀಡಲಾಗಿತ್ತು. ನ್ಯಾಯಮೂರ್ತಿ ಮೈಕಲ್ ಖುನ್ನಾ ಅವರ ವರದಿಯ ಪ್ರಕಾರ ಹಲವಾರು ಕೆಲಸಗಳನ್ನು ಕೈಗೊಳ್ಳಬೇಕಿತ್ತು. ಅವುಗಳಲ್ಲಿ ದೀರ್ಘಾವಧಿ, ಅಲ್ಪಾವಧಿ ಎಂದು ವಿಂಗಡಿಸಲಾಗಿತ್ತು. ಅಲ್ಪಾವಧಿಯ ಕೆಲಸಗಳನ್ನು ತ್ವರಿತವಾಗಿ ಕೈಗೊಂಡು ಐಪಿಎಲ್ ಪಂದ್ಯಾವಳಿ ನಡೆಸಲು ಅನುವು ಮಾಡಿಕೊಡಲಾಗಿತ್ತು.

ಈಗ ಲಾಭದ ಆಸೆಯಿಂದ ಅಹಮದಾಬಾದ್‌ನ ಕ್ರೀಡಾಂಗಣದಲ್ಲಿ 1 ಲಕ್ಷ ಆಸನಗಳಿವೆ. ಹೆಚ್ಚಿನ ಲಾಭವಾಗುತ್ತದೆ ಎಂಬ ಕಾರಣಕ್ಕಾಗಿ ಪಂದ್ಯಾವಳಿಯನ್ನು ಸ್ಥಳಾಂತರ ಮಾಡಲಾಗುತ್ತಿದೆ. ಇದಕ್ಕೂ, ಸರ್ಕಾರಕ್ಕೂ ಸಂಬಂಧವಿಲ್ಲ ಎಂದರು.
ರಾಜ್ಯದಲ್ಲಿ ವಿಧಾನಸಭೆ, ವಿಧಾನ ಪರಿಷತ್ ಎರಡೂ ಸೇರಿದರೆ, 300 ಶಾಸಕರಾಗುತ್ತಾರೆ. ಒಬ್ಬರಿಗೆ ಎರಡು ಟಿಕೆಟ್‌ಗಳನ್ನು ನೀಡಲಾಗುತ್ತಿದೆ. ಒಟ್ಟು 600 ಟಿಕೆಟ್ ನೀಡುವ ಕಾರಣಕ್ಕಾಗಿ ಸ್ಥಳಾಂತರ ಮಾಡುತ್ತಿದ್ದೇವೆ ಎಂದು ಅವರು ಹೇಳಲಿ ಎಂದು ಖಾರವಾಗಿ ಸವಾಲು ಹಾಕಿದರು.
ಯಾರಿಗೆಲ್ಲಾ ಟಿಕೆಟ್ ಕೊಟ್ಟಿದ್ದಾರೆ. ಆರ್‌ಸಿಬಿಯವರು ಎಷ್ಟು ಜನರಿಗೆ ಟಿಕೆಟ್ ಕೊಟ್ಟಿದ್ದಾರೆ.

ಎದುರಾಳಿ ತಂಡದ ಸಿಎಸ್‌ಕೆಯವರು ಯಾರಿಗೆಲ್ಲಾ ಟಿಕೆಟ್ ಕೊಟ್ಟಿದ್ದಾರೆ ಎಂಬುದನ್ನು ಬಹಿರಂಗ ಪಡಿಸಲಿ. ಶಾಸಕರಿಗೆ ಟಿಕೆಟ್ ನೀಡುವ ಕಾರಣಕ್ಕಾಗಿ ಪಂದ್ಯಾವಳಿ ಸ್ಥಳಾಂತರಗೊಳ್ಳುತ್ತಿಲ್ಲ. ಬಿಜೆಪಿ, ಜೆಡಿಎಸ್‌ನವರು ಏನಾದರೂ ಟೀಕೆ ಮಾಡಿಕೊಳ್ಳಲಿ. ಅವರ ಅವಧಿಯಲ್ಲಿ ಕ್ರೀಡೆಗೆ ಎಷ್ಟು ಪ್ರೋತ್ಸಾಹ ನೀಡುತ್ತಿದ್ದರು ಎಂದು ಎಲ್ಲರಿಗೂ ಗೊತ್ತಿದೆ ಎಂದರು.

ತಮಿಳುನಾಡಿನಲ್ಲಿ ರಾಜ್ಯಪಾಲರು ಟಿವಿಕೆಗೆ ಸರ್ಕಾರ ರಚಿಸಲು ಅವಕಾಶ ನೀಡದೇ ಇರುವುದು ಸರಿಯಲ್ಲ ಈಗಾಗಲೇ ಹಲವು ಪ್ರಕರಣಗಳಲ್ಲಿ ನಿರ್ಧಿಷ್ಟವಾದ ಸಂಪ್ರದಾಯಗಳಿವೆ. ಪಕ್ಷಾತೀತವಾಗಿ ರಾಜ್ಯಪಾಲರು ನಡೆದುಕೊಳ್ಳಬೇಕು. ಒಂದು ವೇಳೆ ಪಕ್ಷಪಾತಿಯಾದರೆ, ಟಿವಿಕೆ ಮುಖಂಡರು ನ್ಯಾಯಲಯದ ಮೊರೆ ಹೋಗಲು ಅವಕಾಶಗಳಿವೆ ಎಂದು ಹೇಳಿದರು.

# ಹೊಂಡಕ್ಕೆ ಬಿದ್ದು ವಿದ್ಯಾರ್ಥಿ ಸಾವು : ಪರಿಹಾರಕ್ಕೆ ಆಗ್ರಹಿಸಿ ಶವವಿಟ್ಟು ಪ್ರತಿಭಟನೆ

7 ಗಂಟೆ ಬಾಲಕನ ಶವ ಇಟ್ಟು ತಾಂಡಾದಲ್ಲೇ ಪ್ರತಿಭಟನೆ ಮೃತ ಬಾಲಕನ ಕುಟುಂಬಕ್ಕೆ ತಕ್ಷಣವೇ ಪರಿಹಾರ ಘೋಷಿಸಬೇಕು, ಕಾನೂನು ನಿಯಮ ಉಲ್ಲಂಘಸಿ ಹೊಂಡ ತೋಡಿದ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮಕ್ಕೆ ಒತ್ತಾಯಿಸಿ ಸುಮಾರು 7 ಗಂಟೆಗೂ ಅಧಿಕ ಕಾಲ ಸ್ಥಳೀಯರು ಪ್ರತಿಭಟನೆ ನಡೆಸಿದ ಘಟನೆ ತಾಂಡಾದಲ್ಲಿ ಜರುಗಿತು.
ತಹಶೀಲ್ದಾರ್ ನಾಗಯ್ಯ ಹಿರೇಮಠ ಹಾಗೂ ಸಿಪಿಐ ಎಸ್ ಬಿ ಪಾಟೀಲ ಕುಟುಂಬಸ್ಥರ ಮನವೊಲಿಸಲು ಪ್ರಯತ್ನಿಸಿದರೂ ಸ್ಪಂದಿಸಲಿಲ್ಲ. ಸಚಿವರ ಜತೆ ಈಗಾಗಲೇ ಮಾತನಾಡಿದ್ದೇವೆ. ಸೂಕ್ತ ಪರಿಹಾರ ಒದಗಿಸಿಕೊಡುವುದಾಗಿ ಸಚಿವರು ಭರವಸೆ ನೀಡಿದ್ದಾರೆ ಎಂದರೂ ಮಾತು ಕೇಳದೆ ಶವದ ಅಂತ್ಯಸಂಸ್ಕಾರ ಮಾಡದೇ ಟೆಂಟ್ ಹಾಕಿ ಕುಳಿತು ಆಕ್ರೋಶ ವ್ಯಕ್ತಪಡಿಸಿದರು. ಘಟನಾ ಸ್ಥಳಕ್ಕೆ ಬಂದ ಮಣಿಕಂಠ ರಾಠೋಡ ಅಧಿಕಾರಿಗಳ ವಿರುದ್ಧ ಹರಿಹಾಯ್ದರು. ಕುಟುಂಬಕ್ಕೆ 50 ಲಕ್ಷ ಪರಿಹಾರ ಹಾಗೂ ನಿಯಮಬಾಹಿರವಾಗಿ ಹೊಂಡ ತೆಗೆದ ಗುತ್ತಿಗೆದಾರರ ವಿರುದ್ಧ ಕ್ರಮ ಜಾರಿಯಾಗಬೇಕು ಎಂದು ಆಗ್ರಹಿಸಿದರು.

**ಆಂದೋಲ ಶ್ರೀ ಭೇಟಿ :** ಇದೆ ವೇಳೆ ಡಿಗ್ಗಿತಾಂಡಾಕ್ಕೆ ಭೇಟಿ ನೀಡಿದ ಆಂದೋಲ ಕರುಣೇಶ್ವರ ಮಠದ ಸಿದ್ದಲಿಂಗ ಸ್ವಾಮಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ಚಿತ್ತಾಪುರ ತಾಲ್ಲೂಕಿನಲ್ಲಿ ಹೊಂಡಕ್ಕೆ ಬಿದ್ದು ಸಾಯುವವರ ಸಂಖ್ಯೆ ಹೆಚ್ಚಾಗುತ್ತಿದೆ. ಅಕ್ರಮ ಮೈನಿಂಗ್ ನಡೆಸಿ ಯಾವುದೇ ಕಾನೂನು ಪಾಲಿಸದೇ ನಿರ್ಲಕ್ಷ ವಹಿಸಿದವರ ವಿರುದ್ಧ ಕ್ರಮ ಜರುಗಿಸದೇ ಅವರ ಜತೆ ಶಾಮೀಲು ಆಗಿದ್ದಾರೆ. ತಾಲ್ಲೂಕಿನಲ್ಲಿ ಅಕ್ರಮ ಚಟುವಟಿಕೆಗಳು ರಾಜಾರೋಷವಾಗಿ ನಡೆಯುತ್ತಿದ್ದು ಸಚಿವರು ಸೇರಿದಂತೆ ಎಲ್ಲಾ ಅಧಿಕಾರಿಗಳು ಕಣ್ಮುಚ್ಚಿ ಕುಳಿತಿದ್ದಾರೆ. ಬೆಳಗುಂಪಾ ಬಳಿ ಈ ರೀತಿಯ ಅಪಘಾತ ಜರುಗಿದ್ದರೂ ಯಾರ ವಿರುದ್ಧ ಕ್ರಮ ಜರುಗಿಸಿಲ್ಲ. ಪ್ರಕರಣ ಮುಚ್ಚಿ ಹಾಕುವ ಯತ್ನ ನಡೆಯುತ್ತಿದೆ ಎಂದು ಕಿಡಿ ಕಾರಿದ ಅವರು, ತಾಲ್ಲೂಕಿನ ಎಲ್ಲಾ ಹೊಂಡಗಳಿಗೆ ತಂತಿ ಬೇಲಿ ಹಾಕಿಸಬೇಕು. ಅಕ್ರಮ ಗಣಿಗಾರಿಕೆ ತಡೆದು ಕ್ರಮ ಜರುಗಿಸಬೇಕು. ಜಿಲ್ಲಾಧಿಕಾರಿ, ತಹಶೀಲ್ದಾರ್, ಪೊಲೀಸ್ ಇಲಾಖೆಯ ಅಧಿಕಾರಿಗಳು ಎಲ್ಲಾ ಅಕ್ರಮದಲ್ಲಿ ಭಾಗಿಯಾಗಿದ್ದು ಅವರೆಲ್ಲರ ವಿರುದ್ಧ ಕ್ರಮ ಜಾರಿಯಾಗಬೇಕು ಎಂದು ಆಗ್ರಹಿಸಿದರು.
ರಾತ್ರಿ 8 ಗಂಟೆವರೆಗೆ ಪರಿಹಾರ ಘೋಷಣೆ ಮಾಡದಿದ್ದರೆ ಕಲಬುರಗಿ ಯಾದಗಿರಿ ರಾಷ್ಟ್ರೀಯ ಹೆದ್ದಾರಿ 150ರ ಮೇಲೆ ಶವ ಇಟ್ಟು ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ ಅವರು ನಂತರ ಶವವನ್ನು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಇಟ್ಟು ಪ್ರತಿಭಟನೆ ನಡೆಸುತ್ತೇವೆ ಎಂದು ಘೋಷಿಸಿದರು.

ದಿವ್ಯಾ ಹಾಗರಗಿ ಪ್ರವೇಶಕ್ಕೆ ನಿಬರ್ಂಧ
ತಾಂಡಾದಲ್ಲಿನ ಘಟನಾ ಸ್ಥಳಕ್ಕೆ ಭೇಟಿ ನೀಡಲು ಆಗಮಿಸಿದ್ದ ದಿವ್ಯಾ ಹಾಗರಗಿ ಅವರನ್ನು ಕಾನೂನು ಸುವ್ಯವಸ್ಥೆ ಹಿನ್ನೆಲೆಯಲ್ಲಿ ತಾಂಡಾದ ಒಳಗೆ ಪೊಲೀಸರು ಬಿಡಲಿಲ್ಲ. ಇದರಿಂದ ಪೊಲೀಸರೊಂದಿಗೆ ಅವರು ಕ್ಷಣಹೊತ್ತು ವಾಗ್ವಾದ ನಡೆಸಿದರು.

# ನಿಗದಿತ ರೂಟ್‌ಗಳಲ್ಲಿ ಬಸ್‌ಗಳು ಸಂಚರಿಸಲಿ: ಶಾಸಕ ವೇದವ್ಯಾಸ ಕಾಮತ್

**ಮಂಗಳೂರು**–ನಗರ ವ್ಯಾಪ್ತಿಯಲ್ಲಿ ಪರ್ಮಿಟ್ ನೀಡಲಾಗಿರುವ, ನಿಗದಿಪಡಿಸಿದ ರೂಟ್‌ಗಳಲ್ಲಿಯೇ ಬಸ್ ಗಳು ಕಡ್ಡಾಯವಾಗಿ ಸಂಚರಿಸಬೇಕು ಎಂದು ಶಾಸಕ ವೇದವ್ಯಾಸ ಕಾಮತ್ ಅವರು ಕೆಎಸ್‌ಆರ್‌ಟಿಸಿ ಹಾಗೂ ಬಸ್ ಮಾಲಕರ ಸಂಘಕ್ಕೆ ಸೂಚನೆ ನೀಡಿದ್ದಾರೆ.



ಮಂಗಳೂರು ನಗರ ವ್ಯಾಪ್ತಿಯಲ್ಲಿ ಕೆಲವೆಡೆ ಖಾಸಗಿ ಸಿಟಿ ಬಸ್‌ಗಳು ಸೇರಿದಂತೆ ಕೆ.ಎಸ್.ಆರ್.ಟಿ.ಸಿ ಬಸ್‌ಗಳು ನಿಗದಿತ ಸ್ಥಳಕ್ಕೆ ಹೋಗದಿರುವುದು ಹಾಗೂ ಟ್ರಿಪ್ ಕಡಿತಗೊಳಿಸುತ್ತಿರುವುದರಿಂದ ಸಾರ್ವಜನಿಕರು ಅನುಭವಿಸುತ್ತಿರುವ ಸಮಸ್ಯೆಗಳ ಕುರಿತಂತೆ ಆರ್‌ಟಿಒ ಕಚೇರಿಯಲ್ಲಿ ಅವರು ಗುರುವಾರ ಹಿರಿಯ ಅಧಿಕಾರಿಗಳ, ಬಸ್ ಸಂಘದವರ, ಸಾರ್ವಜನಿಕರ ವಿಶೇಷ ಸಭೆ ನಡೆಸಿದರು.

ಹಲವಾರು ವರ್ಷಗಳಿಂದ ಇಲ್ಲಿನ ಖಾಸಗಿ ಹಾಗೂ ಕೆಎಸ್‌ಆರ್‌ಟಿಸಿ ಬಸ್ಸುಗಳು ಉತ್ತಮ ರೀತಿಯಲ್ಲಿ ಸಾರ್ವಜನಿಕ ಸೇವೆ ನೀಡುತ್ತಿವೆ. ಅದರ ನಡುವೆ ವಾರ್ಡ್ ಸಂಖ್ಯೆ 51 ರ ಸರಿಪಲ್ಲ–ಕನ್ನಗುಡ್ಡೆ, ವಾರ್ಡ್ ಸಂಖ್ಯೆ 53 ರ ಬಜಾಲ್ ಪಡ್ಪು ಪಳ್ಳಕೆರೆ, ಸೇರಿದಂತೆ ಶಕ್ತಿನಗರ, ಮರೋಳಿ ಭಾಗದಲ್ಲಿ ಪರ್ಮಿಟ್ ಇದ್ದರೂ ಬಸ್‌ಗಳು ಸರಿಯಾಗಿ ಕಾರ್ಯ ನಿರ್ವಹಿಸದಿರುವುದು ಸಮಸ್ಯೆಗೆ ಕಾರಣವಾಗಿದೆ. ಇಲ್ಲಿನ ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಶಾಲಾ ಕಾಲೇಜು, ಆಸ್ಪತ್ರೆ, ಕಚೇರಿ, ಸೇರಿದಂತೆ ಅಗತ್ಯ ಸಂದರ್ಭಗಳಲ್ಲಿ ಬಸ್ ಸಂಚಾರವೇ ಆಧಾರವಾಗಿರುವುದರಿಂದ ಬಸ್ ಸಂಘದವರು, ಅಧಿಕಾರಿಗಳು ಅತ್ಯಂತ ಮುತುವರ್ಜಿಯಿಂದ ಕಾರ್ಯ ನಿರ್ವಹಿಸಬೇಕಾದ ಅಗತ್ಯವಿದೆ ಎಂದವರು ಹೇಳಿದರು.

ಮಂಗಳಾದೇವಿ ಸರ್ಕಲ್ ಬಳಿ ಸ್ಮಾರ್ಟ್ ಸಿಟಿ ವತಿಯಿಂದ ನಿರ್ಮಿಸಲಾಗಿರುವ ಬಸ್ ಬೇನಲ್ಲೇ ಎಲ್ಲಾ ಬಸ್ ಗಳು ನಿಲುಗಡೆ ಮಾಡಬೇಕು, ಆರ್.ಟಿ.ಓ ದಲ್ಲಿ ಜನಸಾಮಾನ್ಯರು ಅನುಭವಿಸುತ್ತಿರುವ ತೊಂದರೆಗೆ ಮುಕ್ತಿ ನೀಡಬೇಕು ಎಂದರು.

ಸಾರ್ವಜನಿಕರ ದೂರಿನ ಬಗ್ಗೆ ಈಗಾಗಲೇ ಬಸ್ಸು ಮಾಲಕರ ಸಂಘ ಹಾಗೂ ಸಚಿವರ ಗಮನ ಸೆಳೆಯಲಾಗಿತ್ತು. ಸಾರಿಗೆ ಸಚಿವರಾದ ರಾಮಲಿಂಗ ರೆಡ್ಡಿಯವರು ಸ್ಥಳೀಯ ಶಾಸಕರ ನೇತೃತ್ವದಲ್ಲಿ ಸಭೆ ನಡೆಸುವಂತೆ ಆದೇಶಿಸಿ ದ್ದಾರೆ. ಅದರಂತೆ ಮಹತ್ವದ ಸಭೆ ನಡೆಯುತ್ತಿದೆ. ಮುಂದಿನ 15 ದಿನಗಳ ಒಳಗಾಗಿ ಕೆಎಸ್‌ಆರ್ಟಿಸಿ ಹಾಗೂ ಖಾಸಗಿ ಬಸ್‌ಗಳು ನಿಗದಿಪಡಿಸಿರುವ ರೂಟ್ ಗಳಲ್ಲಿ ಕಡ್ಡಾಯವಾಗಿ ಸಂಚರಿಸುವಂತೆ ಕ್ರಮ ಕೈಗೊಳ್ಳಲಾಗುವುದು. ಇಲ್ಲದಿದ್ದಲ್ಲಿ ಅಂತಹ ಪರ್ಮಿಟ್ ಗಳನ್ನು ಹಸ್ತಾಂತರ ಮಾಡುವ ಪ್ರಕ್ರಿಯೆ ನಡೆಸಲಾಗುವುದು ಎಂದು ಆರ್ ಟಿ ಒ ಅಧಿಕಾರಿ ಸಭೆಯಲ್ಲಿ ತಿಳಿಸಿದರು.

ನಾಗರಿಕ ಹಿತರಕ್ಷಣಾ ಸಮಿತಿಯ ಹನುಮಂತ ಕಾಮತ್, ಕೆಎಸ್‌ಆರ್‌ಟಿಸಿಯ ಮಂಗಳೂರು ವಿಭಾಗೀಯ ನಿಯಂತ್ರಣಾಧಿಕಾರಿ ರಾಜೇಶ್, ಆರ್‌ಟಿಒ ಹಿರಿಯ ಅಧಿಕಾರಿಗಳು, ಬಸ್ ಸಂಘದ ಪ್ರಮುಖರಾದ ಅಝೀಝ್ ಪರ್ತಿ ಪಾಡಿ, ರಾಜೇಂದ್ರ ವರ್ಮಾ ಬಲ್ಲಾಳ್, ರಾಮಚಂದ್ರ, ನವನೀತ, ಮುಹಮ್ಮದ್ ವಾಸೀಮ್, ಸಾರ್ವಜನಿಕರ ಪರ ವಾಗಿ ಪ್ರವೀಣ್ ನಿಡ್ಡೆಲ್, ದೀಪಕ್ ಮರೋಳಿ, ಚಂದ್ರಶೇಖರ ಬಜಾಲ್, ಪ್ರಶಾಂತ್ ಆಳ್ವ, ರವಿಚಂದ್ರ, ಪ್ರಸಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ದಾಖಲಿಸಲು ಪ್ರವೇಶ ಪರೀಕ್ಷೆ ಮೇ 17ಕ್ಕೆ ವಿಸ್ತರಣೆ

ಸಮಾಜ ಕಲ್ಯಾಣ ಇಲಾಖೆಯಲ್ಲಿ 2026–276ನೇ ಸಾಲಿಗೆ ಪ್ರತಿಭಾವಂತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ದಾಖಲಿಸಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.ಸದರಿ ಪ್ರತಿಷ್ಠಿತ ಶಾಲೆಯ ವಿದ್ಯಾರ್ಥಿಗಳಿಗೆ ಈ ಹಿಂದೆ ದಿನಾಂಕ: 10–05–2026 ರಂದು ಪ್ರವೇಶ ಪರೀಕ್ಷೆ ನಡೆಸಲು ತೀರ್ಮಾನಿಸಲಾಗಿತ್ತು. ಆದರೆ, ಕಾರಣಾಂತರಗಳಿಂದ ಸದರಿ ಪ್ರವೇಶ ಪರೀಕ್ಷೆಯನ್ನು ಮುಂದೂಡಿ ದಿನಾಂಕ 17–05–2026 ರಂದು ಭಾನುವಾರ ಪರೀಕ್ಷೆಯನ್ನು ಬೆಳಿಗ್ಗೆ: 9–30 ಗಂಟೆಗೆ ಪ್ರಾಂಶುಪಾಲರು, ಬಾಲಕಿಯರ ಪದವಿ ಪೂರ್ವ ಕಾಲೇಜು ಸ್ಟೇಷನ್ ರಸ್ತೆ, ರಾಯಚೂರುನಲ್ಲಿ ನಡೆಸಲಾಗುತ್ತಿದೆಂದು ಪ್ರವೇಶ ಪರೀಕ್ಷೆಯ ಪ್ರಮಾಣ ಪತ್ರವನ್ನು ಪಡೆಯಲು ಇಲಾಖಾ ವೆಬ್‌ಸೈಟ್ ತಿತಿತಿ.ತಿ.ಇಚಿಡಿ.ಟಿಛಿ.ಟಿ ನಲ್ಲಿ ಡೌನ ಲೋಡ್ ಮಾಡಿಕೊಂಡು ಪರೀಕ್ಷಗೆ ಹಾಜರಾಗಬೇಕೆಂದು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ ಕೋರ್ಸಗೆ ಅರ್ಜಿ ಆಹ್ವಾನ

**ರಾಯಚಊರು ಮೇ 8:** ಕೈಮಗ್ಗ ಮತ್ತು ಜವಳಿ ಇಲಾಖೆಯು ರಾಯಚೂರು 2026–27ನೇ ಸಾಲಿನ ಶೈಕ್ಷಣಿಕ ಅವಧಿಗೆ ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ ಡಿಪ್ಲೋಮಾ ಕೋರ್ಸಗೆ (ಡಿ.ಹೆಚ್.ಟಿ.ಟಿ) ಕೋರ್ಸ್ ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಈ ಕೆಳಕಂಡ ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ,ಗದಗ –ಬೆಟಗೇರಿ 22 ಅಭ್ಯರ್ಥಿ, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಸೆಲಂ ತಮಿಳುನಾಡು, 12 ಅಭ್ಯರ್ಥಿ, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ ನೆಲ್ಲೂರು ಆಂದ್ರಪ್ರದೇಶ, 3 ಅಭ್ಯರ್ಥಿ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಕಣ್ಣೂರು ಕೇರಳ, 2 22 ಅಭ್ಯರ್ಥಿ ಸಂಸ್ಥೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ದಿನಾಂಕ:01.07.2026ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23 ರ ವಯೋಮಿತಿಯಲ್ಲಿರಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಢೀಕೃತ ಅಂಶಗಳು ಮೆರಿಟ್ ಲೆಕ್ಕಾಚಾರಕ್ಕೆ ಆಯ್ಕೆ ಮಾಡಲಾಗುತ್ತದೆ, ಅಭ್ಯರ್ಥಿಗಳು ತಮ್ಮ ಅರ್ಜಿಯನ https://khtigadag.ac.in/Admissionform.pdf ವೆಬ್ ಸೈಟ್ ನಲ್ಲಿ ಲಿಂಕ್ ಡೌನಲೋಡ್ ಮಾಡಿಕೊಂಡು ದಿನಾಂಕ 30.05.2026ರ ಒಳಗಾಗಿ ಪೂರ್ಣ ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ ನರಸಾಪೂರ ಗದಗ–ಬೆಟಗೇರಿ ಇವರಿಗೆ ಸಲ್ಲಿಸಬಹುದೆಂದು ಕೈಮಗ್ಗ ಮತ್ತು ಜವಳಿ ಇಲಾಖೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಕೈಗಾರಿಕಾ ತರಬೇತಿ ಸಂಸ್ಥೆ ರಾಯಚೂರು ವತಿಯಿಂದ ಜಿಲ್ಲಾ ಉದ್ಯೋಗ ಮೇಳ ನಡೆಯಲಿದೆ

**ರಾಯಚೂರು ಮೇ 8:** ಕೈಗಾರಿಕಾ ತರಬೇತಿ ಸಂಸ್ಥೆ ರಾಯಚೂರು ವತಿಯಿಂದ ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ರವರ ಸಹಕಾರದೊಂದಿಗೆ 2026–27 ನೇ ಸಾಲಿನಲ್ಲಿ ದಿನಾಂಕ 11/05/2026 ರಂದು ಬೆಳ್ಳಿಗೆ 10.00 ಗಂಟೆಗೆ ಉದ್ಯೋಗ ಮೇಳವನ್ನು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ರಾಯಚೂರು ಇಲ್ಲಿ ಆಯೋಜಿಸಲಾಗಿದೆ.ಮೇಳದಲ್ಲಿ ಭಾಗವಹಿಸುವ ಕಂಪನಿಗಳು ಸಾವಿತ್ರಿ ಗ್ರೂಪ್ ಆಫ್ ಇಂಡಸ್ಟ್ರೀಸ್, ಷಾ ಹೊಂಡಯ್ಯೆ ಸೇಲ್ಸ್ ಆಂಡ್ ಸರ್ವಿಸಸ್ ರಾಯಚೂರು, ತಿರುಮಲ ಹೊಂಡ ಸೇಲ್ಸ್ ಆಂಡ್ ಸರ್ವಿಸಸ್ ರಾಯಚೂರು, ಹೋಂಡಾ ಪ್ರೈವೇಟ್ ಲಿಮಿಟೆಡ್ ಕೋಲಾರ, ಕೇನ್ಸ ಟೆಕ್ನಾಲಜಿ ಇಂಡಿಯಾ ಲಿಮಿಟೆಡ್, ಎಲ್,ಆಂಡ್,ಟಿ, ಜೆ,ಎಸ್,ಡ್ಬ್ಲೂ ಟೊಯೋಟಾ, ಶಿಲ್ಪಾ ಫರ್ಮಾ ಸಿಟಿಕಲ್ಸ್ ರಾಯಚೂರು, ಸ್ಕೈ ಲೈನ್ ಮ್ಯಾನೆಜಮೇಂಟ್ ಸರ್ವಿಸಸ್, ನಿರ್ಮಾಣ ಆರ್ಗನೈಜೇಷನ್ ಬೆಂಗಳೂರು, ಸಾರಾ ಕನ್ಸಲ್ಟೆನ್ಸಿ ಆಂಡ್ ಸರ್ವಿಸಸ್, ಆಡ್ರೋಯಿಟ್ ಸ್ಟಾಫಿಂಗ್ ಸಲ್ಯೂಷನ್ಸ್, ಇ ಟೂ ಇ ಪ್ರಕ್ಯೂರ್‌ಮೆಂಟ್ ಹಾಗೂ ಬೆಂಗಳೂರು ಮತ್ತು ಹೈದ್ರಾಬಾದ್ ನ ಪ್ರತಿಷ್ಟಿತ ಬಹುರಾಷ್ಟ್ರೀಯ ಮಲ್ಟಿ ನ್ಯಾಷನಲ್ ಕಂಪನಿಗಳು ಸದರಿ ಉದ್ಯೋಗ ಮೇಳದಲ್ಲಿ ವಿವಿಧ ಉದ್ದಿಮೆಗಳ ಪ್ರತಿನಿಧಿಗಳು ಭಾಗವಹಿಸುತ್ತಿದ್ದು ಮೇಳದಲ್ಲಿ ಅಭ್ಯರ್ಥಿಗಳನ್ನು ಆಯ್ಕೆಮಾಡಿಕೊಳ್ಳುತ್ತಿರುವುದರಿಂದ ಸದರಿ ಮೇಳಕ್ಕೆ ಎಸ್.ಎಸ್.ಎಲ್.ಸಿ, ಪಿಯುಸಿ, ಡಿಪ್ಲೋಮೊ ಪೂರ್ಣಗೊಳಿಸಿದ ಹಾಗೂ ಪದವಿಧರರು ಮತ್ತು ಐಟಿಐನ ಎಲ್ಲಾ ವೃತ್ತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಭಾಗವಹಿಸಬಹುದು, ಆಸಕ್ತ ಅಭ್ಯರ್ಥಿಗಳು ಈ ಮೇಳದ ಸದುಪಯೋಗ ಪಡೆದುಕೊಳ್ಳಲು ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬೇಕಾದ ವಿಳಾಸ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಮಾಣಿಕ್ ನಗರ ರಾಯಚೂರು . ಮೊ.ಸಂ: 1) 9036684778 2) 9035198134 ಇವರನ್ನು ಸಂಪರ್ಕಿಸಬಹುದೆಂದು ಉದ್ಯೋಗಾಧಿಕಾರಿಗಳಾದ ನವೀನಕುಮಾರ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ರಾಯಚೂರು ಇಂಡಸ್ಟ್ರಿಯಲ್ ಏರಿಯಾ ನಾಳೆ ವಿದ್ಯುತ್ ವ್ಯತ್ಯಯ


**ರಾಯಚೂರು, ಮೇ 9:** ಮೆಸ್ಕಾಂ ವಿದ್ಯುತ್ ಸಂಬಂದಿತ ಕಾಮಗಾರಿಗಳ ಹಿನ್ನೆಲೆಯಲ್ಲಿ ನಗರದ ಕೆಲವು ಕೈಗಾರಿಕಾ ಪ್ರದೇಶಗಳಲ್ಲಿ ಮೇ 10ರಂದು ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಜೆಸ್ಕಾಂ) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

APMC ಯಾರ್ಡ್ ಉಪಕೇಂದ್ರದಲ್ಲಿ ಜಿಒಎಸ್ ಪವರ್‌ಲೈನ್ ಕಾಮಗಾರಿ ಹಾಗೂ ಲೈನ್ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಬೆಳಗ್ಗೆ 7ರಿಂದ ಸಂಜೆ 4ರವರೆಗೆ ವಿದ್ಯುತ್ ಸರಬರಾಜು ಸ್ಥಗಿತಗೊಳ್ಳಲಿದೆ.

ಈ1 ಇಂಡಸ್ಟ್ರಿಯಲ್ ಏರಿಯಾ–1, ಈ2 ಇಂಡಸ್ಟ್ರಿಯಲ್ ಏರಿಯಾ–2 ಹಾಗೂ ಈ10 ಇಂಡಸ್ಟ್ರಿಯಲ್ ಏರಿಯಾ–3 ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮನವಿ ಮಾಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 24x7 ದೂರು ಕೇಂದ್ರದ ದೂರವಾಣಿ ಸಂಖ್ಯೆ 08532–226386 ಹಾಗೂ 08532–231999 ಅನ್ನು ಸಂಪರ್ಕಿಸಬಹುದಾಗಿದೆ.

# ಮೂಡುಬಿದಿರೆ: ಕನ್ನಡ ಸಾಹಿತ್ಯ ಪರಿಷತ್ತು ಸಂಸ್ಥೆಯ ಸಂಸ್ಥಾಪನಾ ದಿನಾಚರಣೆ




**ಮೂಡುಬಿದಿರೆ**–ಕನ್ನಡದ ಅಭಿವೃದ್ಧಿಗೆ ಮಹತ್ತರ ಕೊಡುಗೆ ನೀಡಿರುವ ಕನ್ನಡ ಸಾಹಿತ್ಯ ಪರಿಷತ್ತು ಸಂಸ್ಥೆಯ ಸಂಸ್ಥಾಪನಾ ದಿನಾಚರಣೆ ಮೂಡಬಿದಿರೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಘಟಕದ ಆಶ್ರಯದಲ್ಲಿ ಆಳ್ವಾಸ್ ಪದವಿ ಸ್ವಾಯತ್ತ ಕಾಲೇಜಿನಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕ ರಾಮಪ್ರಸಾದ ಕಾಂಚೋಡು ಮಾತನಾಡಿ, ಕನ್ನಡದ ಕಟ್ಟಾಳುಗಳ ಬೆವರಿನ ಫಲವೇ ಕನ್ನಡ ಸಾಹಿತ್ಯ ಪರಿಷತ್ತು. ಅದರ ಹುಟ್ಟುಹಬ್ಬವನ್ನು ಆಚರಿಸುವುದು ಪ್ರತಿಯೊಬ್ಬ ಕನ್ನಡಿಗನಿಗೂ ಹೆಮ್ಮೆಯ ವಿಷಯ ಎಂದು ಅಭಿಪ್ರಾಯಪಟ್ಟರು.

ಕನ್ನಡ ಭಾಷೆಯ ಅಭಿವೃದ್ಧಿಗೆ ಹಲವು ದಶಕಗಳಿಂದ ಸೇವೆ ಸಲ್ಲಿಸುತ್ತಿರುವ ಸಾಹಿತ್ಯ ಪರಿಷತ್ತು, ಗ್ರಂಥ ಪ್ರಕಾಶನ, ಸಂಶೋಧನೆ, ಸಾಹಿತ್ಯ ಸಮ್ಮೇಳನಗಳು ಹಾಗೂ ಸಂಸ್ಕೃತಿ ಸಂರಕ್ಷಣೆ ಮುಂತಾದ ಕ್ಷೇತ್ರಗಳಲ್ಲಿ ವಿಶಿಷ್ಟ ಕೊಡುಗೆ ನೀಡಿದೆ. ಮಹಾಕಾವ್ಯಗಳು, ಶಾಸನಗಳು ಮತ್ತು ಮೌಖಿಕ ಸಾಹಿತ್ಯವನ್ನು ಸಂಗ್ರಹಿಸಿ ಗ್ರಂಥರೂಪದಲ್ಲಿ ಉಳಿಸುವ ಮೂಲಕ ಕನ್ನಡದ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವನ್ನು ಇದು ನಿರಂತರವಾಗಿ ಮಾಡುತ್ತಿದೆ ಎಂದರು.

ಇಂದಿನ ಡಿಜಿಟಲ್ ಯುಗದಲ್ಲಿ ಕನ್ನಡದ ಬಳಕೆಯನ್ನು ಹೆಚ್ಚಿಸುವುದು, ಆಂಗ್ಲಮಾಧ್ಯಮ ವಿದ್ಯಾರ್ಥಿಗಳಲ್ಲಿ ಕನ್ನಡಾಭಿ ಮಾನ ಬೆಳೆಸುವುದು ಹಾಗೂ ತಂತ್ರಜ್ಞಾನವನ್ನು ಅರ್ಥಪೂರ್ಣವಾಗಿ ಬಳಸಿಕೊಂಡು ಕನ್ನಡವನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಅವರು ಕರೆ ನೀಡಿದರು.ಮೂಡಬಿದಿರೆ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವೇಣುಗೋಪಾಲ ಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು.ಆಳ್ವಾಸ್ ಪದವಿ ಸ್ವಾಯತ್ತ ಕಾಲೇಜಿನ ವಾಣಿಜ್ಯ ವಿಭಾಗದ ಮುಖ್ಯಸ್ಥ ಡಾ. ರಾಮಕೃಷ್ಣ ಶೆಟ್ಟಿ ಪ್ರಾರ್ಥಿಸಿ, ಕನ್ನಡ ವಿಭಾಗದ ಮುಖ್ಯಸ್ಥ ಡಾ. ಯೋಗೀಶ್ ಕೈರೋಡಿ ಕಾರ್ಯಕ್ರಮವನ್ನು ನಿರೂಪಿಸಿದರು.

# ಕರ್ನಾಟಕದ ರಾಜಕೀಯದ ಮೇಲೆ ಪರಿಣಾಮ ಬೀರುತ್ತಾ ಕೇರಳ ಸಿಎಂ ಆಯ್ಕೆ..?

**ಬೆಂಗಳೂರು, ಮೇ 8–** ನೆರೆ ರಾಜ್ಯ ಕೇರಳಂನಲ್ಲಿನ ಮುಖ್ಯಮಂತ್ರಿ ಆಯ್ಕೆ ಪ್ರಕ್ರಿಯೆಗಳು ರಾಜ್ಯ ರಾಜಕಾರಣದಲ್ಲಿ ಪರಿಣಾಮ ಬೀರುವ ಸಾಧ್ಯತೆಗಳಿವೆ.ಕೇರಳ ರಾಜ್ಯದ ಮುಖ್ಯಮಂತ್ರಿ ರೇಸಿನಲ್ಲಿ ವಿರೋಧ ಪಕ್ಷದ ನಾಯಕ ವಿ.ಡಿ.ಸತೀಶನ್, ಕೆ.ಸಿ.ವೇಣುಗೋಪಾಲ್, ರಮೇಶ್ ಚೆನ್ನಿತ್ತಲ ಹಾಗೂ ಶಶಿತರೂರ್ ಪ್ರಬಲ ಅಕಾಂಕ್ಷಿಗಳಾಗಿದ್ದಾರೆ. ಶಶಿತರೂರ್ ಮತ್ತು ಕೆ.ಸಿ.ವೇಣುಗೋಪಾಲ್ ಸಂಸದರಾಗಿದ್ದು, ಒಂದು ವೇಳೆ ಮುಖ್ಯಮಂತ್ರಿ ಸ್ಥಾನಕ್ಕೇರಿದರೆ, ಲೋಕಸಭೆಗೆ ಉಪಚುನಾವಣೆ ನಡೆಯುವ ಅನಿವಾರ್ಯತೆ ಎದುರಾಗಲಿದೆ.

ಕೇರಳ ಕಾಂಗ್ರೆಸ್ ಮತ್ತು ಯುಡಿಎಫ್‌ನ ಮಿತ್ರಪಕ್ಷಗಳು ಸಂಸದರಿಗೆ ಮುಖ್ಯಮಂತ್ರಿ ಸ್ಥಾನ ನೀಡುವುದನ್ನು ಪ್ರಬಲವಾಗಿ ವಿರೋಧಿಸುತ್ತಿವೆ. ವಿರೋಧ ಪಕ್ಷದ ನಾಯಕರಾಗಿ ಕಳೆದ 5 ವರ್ಷಗಳಿಂದ ಪ್ರಬಲ ಹೋರಾಟ ನಡೆಸಿದ ವಿ.ಡಿ.ಸತೀಶನ್‌ಅವರ ಪರವಾಗಿ ಒಲವು ವ್ಯಕ್ತವಾಗಿದೆ. ಆದರೆ ರಾಷ್ಟ್ರ ರಾಜಕಾರಣದಲ್ಲಿ ಗುರುತಿಸಿಕೊಂಡಿರುವ ಕೆ.ಸಿ.ವೇಣುಗೋಪಾಲ್ ರಾಜ್ಯ ರಾಜಕಾರಣಕ್ಕೆ ಮರಳುವ ಆಸಕ್ತಿ ತೋರಿಸಿದ್ದು, ಮುಖ್ಯಮಂತ್ರಿಯಾಗಲು ತುದಿಗಾಲ ಮೇಲೆ ನಿಂತಿದ್ದಾರೆ.

ಒಂದು ವೇಳೆ ಕೆ.ಸಿ.ವೇಣುಗೋಪಾಲ್ ಅವರಿಗೆ ಮುಖ್ಯಮಂತ್ರಿ ಸ್ಥಾನ ಒಲಿದರೆ, ಕರ್ನಾಟಕದಲ್ಲಿ ನಾಯಕತ್ವದ ಬದಲಾವಣೆ ಚರ್ಚೆಯ ಮೇಲೆ ಪರಿಣಾಮ ಉಂಟಾಗಲಿದೆ. ಕೆ.ಸಿ.ವೇಣುಗೋಪಾಲ್, ರಾಹುಲ್ ಗಾಂಧಿ ಅವರ ಆಪ್ತ ಬಳಗದಲ್ಲಿದ್ದಾರೆ. ಸಿದ್ದರಾಮಯ್ಯ ಅವರೊಂದಿಗೆ ಆತ್ಮೀಯ ಬಾಂಧವ್ಯ ಹೊಂದಿದ್ದಾರೆ. ದೆಹಲಿ ಮಟ್ಟದಲ್ಲಿ ಸಿದ್ದರಾಮಯ್ಯ ಅವರ ಪ್ರಭಾವ ಬೆಳೆಯಲು ಕೆ.ಸಿ.ವೇಣುಗೋಪಾಲ್ ಅವರ ಶಿಫಾರಸುಗಳು ಕಾರಣವಾಗಿವೆ ಎಂದು ಹೇಳಲಾಗುತ್ತಿವೆ.

ಕರ್ನಾಟಕ ರಾಜ್ಯ ಉಸ್ತುವಾರಿ ನಾಯಕರಾಗಿರುವ ರಣದೀಪ್ ಸಿಂಗ್ ಸುರ್ಜೇವಾಲ, ಡಿ.ಕೆ.ಶಿವಕುಮಾರ್ ಅವರ ಪರವಾಗಿದ್ದು, ಎರಡೂವರೆ ವರ್ಷದ ಅಧಿಕಾರ ಸೂತ್ರಕ್ಕೆ ಬದ್ಧರಾಗಿದ್ದಾರೆ. ಸಹಜವಾಗಿಯೇ ದೆಹಲಿಯಲ್ಲಿ ಕೆ.ಸಿ.ವೇಣುಗೋಪಾಲ್ ಇಲ್ಲವೆಂದಾದರೆ, ಸಿದ್ದರಾಮಯ್ಯ ಅವರಿಗೆ ಹಿನ್ನಡೆಯಾಗುವ ಸಾಧ್ಯತೆ ಇದೆ. ಈವರೆಗೂ ದೆಹಲಿಯಲ್ಲಿ ರಾಹುಲ್ ಗಾಂಧಿ, ಡಿ.ಕೆ.ಶಿವಕುಮಾರ್ ಅವರಿಗೆ ಭೇಟಿ ಮಾಡಲು



ಸಮಯ ನೀಡಿಲ್ಲ. ಇದರ ಹಿಂದೆ ಕೆ.ಸಿ.ವೇಣುಗೋಪಾಲ್ ಅವರ ಪ್ರಭಾವವಿದೆ ಎಂದು ಹೇಳಲಾಗುತ್ತಿದೆ.ಕೆ.ಸಿ.ವೇಣುಗೋಪಾಲ್ ರಾಜ್ಯ ರಾಜಕಾರಣಕ್ಕೆ ತೆರಳಿದರೆ, ದೆಹಲಿಯಲ್ಲಿ ಸಿದ್ದರಾಮಯ್ಯ ಅವರ ಪರವಾಗಿ ವಕಾಲತ್ತು ವಹಿಸುವವರು ಇಲ್ಲದಂತಾಗಿ, ಡಿ.ಕೆ.ಶಿವಕುಮಾರ್ ಪರವಾದ ಅಲೆ ಸೃಷ್ಟಿಯಾಗಬಹುದು ಎಂಬ ಚರ್ಚೆಗಳಿವೆ.

ಕೇರಳದಲ್ಲಿ ಅಧಿಕಾರ ಹಿಡಿಯಲು ಕೆ.ಸಿ.ವೇಣುಗೋಪಾಲ್ ಕರ್ನಾಟಕದ ಸಚಿವರ ನೆರವು ಪಡೆದಿದ್ದಾರೆ. ಸಿದ್ದರಾಮಯ್ಯ ಅವರ ಆಪ್ತರಾಗಿರುವ ಸಚಿವ ಜಮೀರ್ ಅಹಮದ್ ಖಾನ್ ಚುನಾವಣೆಯ ಸಂದರ್ಭದಲ್ಲಿ ಕೇರಳದಲ್ಲಿ ಬೀಡುಬಿಟ್ಟು 7 ಜಿಲ್ಲೆಗಳ ಉಸ್ತುವಾರಿ ನಿರ್ವಹಿಸಿದ್ದರು. ಅವುಗಳಲ್ಲಿ ಒಟ್ಟು 33 ಕ್ಷೇತ್ರಗಳ ಪೈಕಿ 22 ಕಡೆ ಕಾಂಗ್ರೆಸ್ ಗೆಲುವು ಕಂಡಿತ್ತು.

ಕೆ.ಸಿ.ವೇಣುಗೋಪಾಲ್ ಇದೇ ರೀತಿ ಬೇರೆ ಬೇರೆ ರಾಜ್ಯಗಳ ಪ್ರಭಾವಿ ನಾಯಕರನ್ನು ಬಳಸಿಕೊಂಡು ಕೇರಳ ವಿಧಾನಸಭೆಯ ಚುನಾವಣೆಯಲ್ಲಿ ಕೆಲಸ ಮಾಡಿಸಿದ್ದರು. ಆ ಪ್ರಭಾವವನ್ನು ಬಳಸಿಕೊಂಡು ಮುಖ್ಯಮಂತ್ರಿ ಸ್ಥಾನ ತಮಗೆ ಬೇಕು ಎಂದು ಒತ್ತಡ ಹೇರುತ್ತಿದ್ದಾರೆ. ಚುನಾವಣೆ ಬಳಿಕದ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಜಮೀರ್ ಅಹಮದ್ ಖಾನ್ ಕೇರಳಕ್ಕೆ ಭೇಟಿ ನೀಡಿದ್ದು ಗಮನಾರ್ಹವಾಗಿದೆ.

# ಜಿಬಿಎ ಚುನಾವಣೆಗೆ ಮುಹೂರ್ತ

**ಬೆಂಗಳೂರು, ಮೇ.8–** ಸುಪ್ರೀಂ ಕೋರ್ಟ್ ಸೂಚನೆಯಂತೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ಜೂನ್ 20 ರಿಂದ 24ರೊಳಗೆ ಚುನಾವಣೆ ನಡೆಸುವುದು ಕಡ್ಡಾಯವಾಗಿದ್ದು, ಈ ಅವಧಿಯಲ್ಲೇ ಮತದಾನ ನಡೆಯಲಿದೆ ಎಂದು ರಾಜ್ಯ ಮುಖ್ಯ ಚುನಾವಣಾ ಆಯುಕ್ತ ಸಂಗ್ರೇಶಿ ತಿಳಿಸಿದ್ದಾರೆ.




ಇಂದು ಆಯೋಗದಲ್ಲಿ ನಡೆದ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ದಿನಾಂಕ ಪ್ರಕಟಣೆ ಮಾತ್ರ ಬಾಕಿ ಇದ್ದು, ಅದನ್ನು ಒಂದು ವಾರದೊಳಗೆ ನಿಗದಿಪಡಿಸಲಾಗುವುದು ಎಂದರು. ಜಿಬಿಎ ವತಿಯಿಂದ ಚುನಾವಣೆಯನ್ನು ಸ್ವಲ್ಪ ಮುಂದೂಡುವಂತೆ ಮನವಿ ಬಂದಿದ್ದರೂ, ಜೂನ್ 30ರೊಳಗೆ ಚುನಾವಣೆ ಪೂರ್ಣಗೊಳಿಸಬೇಕೆಂದು ಸುಪ್ರೀಂ ಕೋರ್ಟ್ ಸ್ಪಷ್ಟ ಆದೇಶ ನೀಡಿರುವ ಹಿನ್ನೆಲೆಯಲ್ಲಿ ಅದನ್ನು ಮುಂದೂಡುವ ಅಧಿಕಾರ ಇಲ್ಲ ಎಂದು ಹೇಳಿದರು.

ಜೂನ್ 24ರೊಳಗೆ ಸರ್ಕಾರಿ ಪ್ರಾಯೋಜಿತ ಕಾರ್ಯಕ್ರಮಗಳಿದ್ದರೆ ಅವನ್ನು ಶೀಘ್ರ ಮುಗಿಸಲು ಸೂಚನೆ ನೀಡಲಾಗಿದೆ. ಯಾವ ದಿನ ಮತದಾನ ನಡೆಸಬೇಕು ಎಂಬುದನ್ನು ಶೀಘ್ರದಲ್ಲೇ ಅಂತಿಮಗೊಳಿಸಲಾಗುವುದು ಎಂದು ಅವರು ತಿಳಿಸಿದರು. "ಜಿಬಿಎ ಯಾವ ಸಮಸ್ಯೆಯನ್ನೇ ಹೇಳಿದರೂ, ನಿಗದಿತ ಅವಧಿಯೊಳಗೆ ಚುನಾವಣೆ ನಡೆಸುವುದು ಅನಿವಾರ್ಯ" ಎಂದು ಅವರು ಖಚಿತಪಡಿಸಿದರು.

ಚುನಾವಣಾ ಸಿದ್ಧತೆಗಳು ಪೂರ್ಣಗೊಳ್ಳುತ್ತಿವೆ: ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮಾತನಾಡಿ, ಚುನಾವಣೆಗೆ ಅಗತ್ಯವಿರುವ ಬಹುತೇಕ ಪೂರ್ವ ಸಿದ್ಧತೆಗಳು ಪೂರ್ಣಗೊಂಡಿವೆ ಎಂದರು. ಈಗಾಗಲೇ ವಾರ್ಡ್ ವಿಂಗಡಣೆ, ಮೀಸಲಾತಿ ಹಾಗೂ ಅಂತಿಮ ಮತದಾರರ ಪಟ್ಟಿ ಸಿದ್ಧವಾಗಿದೆ.
ಮುಂದಿನ ಹಂತದಲ್ಲಿ ಮತಗಟ್ಟೆಗಳ ಅಂತಿಮ ಪಟ್ಟಿ ಪ್ರಕಟಣೆ, ಚುನಾವಣಾಧಿಕಾರಿ (RO), ಸಹಾಯಕ ಚುನಾವಣಾಧಿಕಾರಿ (ARO) ಮತ್ತು ಬಿಎಲ್‌ಒಗಳ ನೇಮಕ, ಸಿಬ್ಬಂದಿ ತರಬೇತಿ, ಮತಪೆಟ್ಟಿಗೆಗಳ ವ್ಯವಸ್ಥೆ ಮತ್ತು ಭದ್ರತಾ ಕ್ರಮಗಳು, ಮತ ಎಣಿಕೆ ಕೇಂದ್ರಗಳ ಸಿದ್ಧತೆ, ಇತ್ಯಾದಿ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ಹೇಳಿದರು.
ಸಭೆಯಲ್ಲಿ ಐದು ಪಾಲಿಕೆಗಳ ಆಯುಕ್ತರು ಹಾಗೂ ಹಿರಿಯ ಅಧಿಕಾರಿಗಳು ಭಾಗವಹಿಸಿ, ಚುನಾವಣಾ ನಿರ್ವಹಣೆಗೆ ಸಂಬಂಧಿಸಿದ ವಿವಿಧ ಅಂಶಗಳ ಬಗ್ಗೆ ಚರ್ಚೆ ನಡೆಸಿದರು.
ಒಟ್ಟಾರೆ, ಸುಪ್ರೀಂ ಕೋರ್ಟ್ ಗಡುವಿನೊಳಗೆ ಜಿಬಿಎ ಚುನಾವಣೆ ನಡೆಸುವುದು ಖಚಿತವಾಗಿದ್ದು, ಅಧಿಕೃತ ದಿನಾಂಕ ಘೋಷಣೆಗೆ ಈಗ ಕಾದು ನೋಡಬೇಕಾಗಿದೆ.

# ಕ್ರೀಡೆಗಳಿಂದ ಆರೋಗ್ಯ ವೃದ್ಧಿ ಸಾಧ್ಯ–ಕೆ.ಜಯದೇವ್



**ಕೋಲಾರ,ಮೇ,8–** ಬದಲಾದ ಆಹಾರಪದ್ಧತಿಯಿಂದ ವಿವಿಧ ರೋಗಗಳಿಗೆ ತುತ್ತಾಗುತ್ತಿರುವ ಈ ಸಂದರ್ಭದಲ್ಲಿ ಕ್ರೀಡೆಗಳು ದೈಹಿಕ ಹಾಗೂ ಮಾನಸಿಕ ಆರೋಗ್ಯ ರಕ್ಷಣೆಗೆ ಸಹಕಾರಿಯಾಗಿವೆ ಎಂದು ಕರ್ನಾಟಕ ಪ್ಯಾರಾ ಒಲಂಫಿಕ್ಸ್ ಅಸೋಷಿಯೇಷನ್ ಜಿಲ್ಲಾಧ್ಯಕ್ಷ ಕೆ.ಜಯದೇವ್ ತಿಳಿಸಿದರು.

ನಗರದ ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಗುರುವಾರ ಕರ್ನಾಟಕ ಅಥ್ಲೇಟಿಕ್ ಅಸೋಸಿಯೇಷನ್ ಕೋಲಾರ ಘಟಕದಿಂದ ಹಮ್ಮಿಕೊಂಡಿದ್ದ ಬೇಸಿಗೆ ಶಿಬಿರದ ಸಮಾರೋಪದಲ್ಲಿ ಅವರು ಮಾತನಾಡಿ ಪೋಷಕರು ಮಕ್ಕಳನ್ನು ಅಂಕ ಗಳಿಸುವ ಯಂತ್ರಗಳನ್ನಾಗಿಸಿ ಕ್ರೀಡೆಗಳಿಂದ ದೂರ ಮಾಡುವುದು ಸರಿಯಲ್ಲ ಎಂದ ಅವರು, ಕ್ರೀಡೆಗಳಿಂದಲೂ ಬದುಕು ಉಜ್ವಲವಾಗುತ್ತದೆ ಎಂದು ತಿಳಿಸಿ, ಉನ್ನತ ಶಿಕ್ಷಣ, ಉದ್ಯೋಗದಲ್ಲಿ ಕ್ರೀಡಾಪಟುಗಳಿಗೆ ಮೀಸಲಾತಿ ಇದೆ ಎಂದು ತಿಳಿಸಿದರು.

ಪಠ್ಯದಿಂದ ಮಾತ್ರವೇ ಸಾಧನೆ ಸಾಧ್ಯ ಎಂಬ ಮಾತು ಬೇಡ, ಕ್ರೀಡೆಗಳಲ್ಲೂ ಉತ್ತಮ ಸಾಧನೆಯೊಂದಿಗೆ ರಾಜ್ಯ,ರಾಷ್ಟ್ರ, ಅಂತರರಾಷ್ಟ್ರೀಯ ಖ್ಯಾತಿ ಗಳಿಸಿರುವ ಅನೇಕ ಕ್ರೀಡಾಪಟುಗಳು ನಮ್ಮ ಮುಂದೆ ಇದ್ದಾರೆ ಎಂದು ತಿಳಿಸಿದರು.

ಅಥ್ಲೇಟಿಕ್ಸ್‌ನಲ್ಲಿ ಸಾಧನೆ ಸುಲಭದ ಮಾತಲ್ಲ, ಒಲಂಫಿಕ್ಸ್‌ನಲ್ಲಿ ಯಾವ ದೇಶ ಎಷ್ಟು ಚಿನ್ನದ ಪದಕ ಗಳಿಸುತ್ತದೆ ಎಂಬುದನ್ನು ಕಾತರದಿಂದ ನೋಡುತ್ತೇವೆ, ಆದರೆ ನಮ್ಮ ದೇಶ ಇಲ್ಲಿನ ಜನಸಂಖ್ಯೆಗೆ ತಕ್ಕಂತೆ ನಿರೀಕ್ಷಿತ ಸಾಧನೆ ಮಾಡುತ್ತಿಲ್ಲ ಎಂಬ ನೋವು ಇದೆ ಎಂದರು.ಅಥ್ಲೇಟಿಕ್ಸ್ ಅಸೋಸಿಯೇಷನ್‌ನಿಂದ ಏ.15 ರಿಂದ ಆರಂಭವಾದದೀ ಬೇಸಿಗೆ ಶಿಬಿರದಲ್ಲಿ 22 ದಿನಗಳ ಅಥ್ಲೆಟಿಕ್ಸ್‌ನಲ್ಲಿ ಸಾಧಕರಾಗಲು ಇಚ್ಚೆಇರುವ ಮಕ್ಕಳನ್ನು ಪ್ರೋತ್ಸಾಹಿಸಿ ಸಿದ್ದಗೊಳಿಸುವ ಕೆಲಸ ಮಾಡಿದ್ದು, ಬೇಸಿಗೆ ರಜೆಯಲ್ಲಿ ಕಾಲಹರಣ ಮಾಡುವ ಬದಲಿಗೆ ನೀವು ಬಂದು ಇಲ್ಲಿ ಕ್ರೀಡಾ ಕಲಿಕೆಯಲ್ಲಿ ಭಾಗವಹಿಸಿದ್ದೀರಿ ಎಂದು ಅಭಿನಂದಿಸಿದರು.

ಶಿಬಿರದಲ್ಲಿ ಪಾಲ್ಗೊಂಡ ಮಕ್ಕಳು ಉತ್ತಮ ಕ್ರೀಡಾ ಸಾಧಕರಾಗಿ ಒಲಂಪಿಕ್ಸ್‌ನಲ್ಲಿ ದೇಶವನ್ನು ಪ್ರತಿನಿಧಿಸುವ ಶಕ್ತಿ, ಅದೃಷ್ಟ ಪಡೆದುಕೊಳ್ಳಿ, ನಿಮ್ಮ ಕ್ರೀಡಾ ಅಭ್ಯಾಸ ನಿರಂತರವಾಗಿ ಮುಂದುವರೆಸಿ ಎಂದು ಹಾರೈಸಿದರು.

ಕರ್ನಾಟಕ ಅಥ್ಲೇಟಿಕ್ಸ್ ಅಸೋಸಿಯೇಷನ್ ಜಿಲ್ಲಾ ಕಾರ್ಯದರ್ಶಿ ರಾಘವೇಂದ್ರ, ನಿಮ್ಮ ಶಿಕ್ಷಣಕ್ಕೆ ಯಾವುದೇ ಚ್ಯುತಿ ಬಾರದ ರೀತಿಯಲ್ಲಿ ಅಥ್ಲೇಟಿಕ್ಸ್ ಕ್ರೀಡಾಪಟುಗಳಾಗಿ ಹೊರಹೊಮ್ಮಬಹುದು, ನಿತ್ಯ ಬೆಳಗ್ಗೆ ವ್ಯಾಯಾಮ ಮಾಡುವ ನೀವು ನಿಮಗಿಷ್ಟವಾದ ಕ್ರೀಡೆಯಲ್ಲಿ ಆ ಸಮಯವನ್ನು ತೊಡಗಿಸಿಕೊಳ್ಳಿ ನಿರಂತರ ಅಭ್ಯಾಸ ಮಾಡಿ ಸಾಧಕರಾಗಿ ಹೊರಹೊಮ್ಮಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಅಥ್ಲೇಟಿಕ್ಸ್ ಅಸೋಸಿನೇಷನ್ ಅಧ್ಯಕ್ಷ ಜಗನ್ನಾಥ್, ಗುಂಪು ಆಟಗಳಿಗಿಂತ ಹೆಚ್ಚು ಪ್ರಾಧಾನ್ಯತೆಯನ್ನು ಅಥ್ಲೆಟಿಕ್ಸ್ ಹೊಂದಿದೆ, ಇದರ ಅಭ್ಯಾಸವನ್ನು ನೀವೇ ಏಕಾಂಗಿಯಾಗಿಯೂ ನಿತ್ಯ ಮುಂದುವರೆಸಬಹುದು ಆದರೆ ಗುಂಪು ಕ್ರೀಡೆಗಳಿಗೆ ಒಂದಷ್ಟು ಕ್ರೀಡಾಪಟುಗಳ ಸಹಕಾರ ಅಗತ್ಯವಿರುತ್ತದೆ ಎಂದು ತಿಳಿಸಿ, ನಿರಂತರ ಅಭ್ಯಾಸ ಮಾಡಿದರೆ ಖಂಡಿತಾ ನೀವು ರಾಜ್ಯ,ರಾಷ್ಟ್ರ,ಅಂತರರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಬಹುದು ಎಂದರು.

22 ದಿನಗಳ ಅಥ್ಲೇಟಿಕ್ಸ್ ಬೇಸಿಗೆ ಶಿಬಿರದಲ್ಲಿ ಶಿಬಿರಾರ್ಥಿಗಳು ಹಾಗೂ ಪೋಷಕರು ತಮ್ಮ ಅನಿಸಿಕೆ ಹಂಚಿಕೊಂಡು ಜಿಲ್ಲಾ ಕೇಂದ್ರದಲ್ಲಿ ಇದೊಂದು ಉತ್ತಮ ಬೆಳವಣಿಗೆಯಾಗಿದೆ,

# ಒಂಟಿ ಮಹಿಳೆ ಕೊಂದು ಹಣಕ್ಕೆ ಸಂಚು: ಐವರ ಬಂಧನ




**ಬೆಂಗಳೂರು,ಮೇ.8–**ಹಣದ ಆಸೆಗಾಗಿ ಒಂಟಿ ಮಹಿಳೆಯೊಬ್ಬರನ್ನು ಉದ್ದೇಶಪೂರ್ವಕವಾಗಿ ಅಪಘಾತಕ್ಕೀಡು ಮಾಡಿ ಕೊಲೆಗೈದಿರುವ ಸಿನಿಮೀಯ ಘಟನೆ ನಗರದಲ್ಲಿ ಬೆಳಕಿಗೆ ಬಂದಿದೆ.

ಕಳೆದ ಏಪ್ರಿಲ್ 21ರಂದು ಕುರುಬರಹಳ್ಳಿಯ ಪೈಪ್ ಲೇನ್ ರಸ್ತೆಯಲ್ಲಿ ನಡೆದ ಈ ಘಟನೆಯನ್ನು ಆರಂಭದಲ್ಲಿ 'ಅಪಘಾತ' ಎಂದು ಬಿಂಬಿಸಲಾಗಿತ್ತು. ಆದರೆ ಮಹಾಲಕ್ಷ್ಮಿ ಲೇಔಟ್ ಪೊಲೀಸರ ಚುರುಕಿನ ತನಿಖೆಯಿಂದಾಗಿ ಇದು ಸುಲಿಗೆಗಾಗಿ ನಡೆದ ವ್ಯವಸ್ಥಿತ ಕೊಲೆ ಎಂಬುದು ಸಾಬೀತಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ರಾಕೇಶ್, ಮಂಜುನಾಥ್, ಚೇತನ್, ಪ್ರದೀಪ್ ಹಾಗೂ ಯೋಹಾನ್ ಸೇರಿ ಐವರು ಆರೋಪಿಗಳನ್ನು ಬಂಧಿಸಿದ್ದಾರೆ.

ಆರೋಪಿ ಚೇತನ್ ಎಂಬಾತ ವಿಜಯಲಕ್ಷ್ಮಿ ಎಂಬುವರ ಪರಿಚಯ ಹೊಂದಿದ್ದ ಹಾಗೂ ಅವರ ಬಳಿ ಸಾಲ ಪಡೆದಿದ್ದು, ಆಕೆಯ ಬಳಿ ಹೆಚ್ಚಿನ ಹಣ ಮತ್ತು ಚಿನ್ನಾಭರಣ ಇದೆ ಎಂದು ತಿಳಿದಿದ್ದ ಚೇತನ್, ಸ್ನೇಹಿತರೊಂದಿಗೆ ಸೇರಿ ಕಳ್ಳತನಕ್ಕೆ ಸಂಚು ರೂಪಿಸಿದ್ದನು,ಅದರಂತೆ ಏಪ್ರಿಲ್ 21ರಂದು ವಿಜಯಲಕ್ಷ್ಮಿ ಅವರು ರಸ್ತೆಯಲ್ಲಿ ನಡೆದು ಹೋಗುತ್ತಿದ್ದಾಗ ರಾಕೇಶ್ ಎಂಬಾತ ಬೈಕ್‌ನಿಂದ ಜೋರಾಗಿ ಡಿಕ್ಕಿ ಹೊಡೆದಿದ್ದಾನೆ. ಕೂಡಲೇ ಅಲ್ಲಿಗೆ ಆಟೋದಲ್ಲಿ ಬಂದ ಇತರ ಆರೋಪಿಗಳು ವಿಜಯಲಕ್ಷ್ಮಿ ಅವರನ್ನು ಆಸ್ಪತ್ರೆಗೆ ಸೇರಿಸುವ ನಾಟಕವಾಡಿದ್ದಾರೆ.

ಮಹಿಳೆಯನ್ನು ಆಸ್ಪತ್ರೆಗೆ ದಾಖಲಿಸುವ ಸೋಗಿನಲ್ಲಿ ಮಂಜುನಾಥ್ ಎಂಬ ಆರೋಪಿ ಆಕೆಯ ಪರ್ಸ್‌ನಲ್ಲಿದ್ದ ಮನೆ ಕೀಲಿಯನ್ನು ಕಳವು ಮಾಡಿ ನೇರವಾಗಿ ವಿಜಯಲಕ್ಷ್ಮಿ ಅವರ ಮನೆಗೆ ತೆರಳಿ ಕಳ್ಳತನಕ್ಕೆ ಯತ್ನಿಸಿದ್ದಾಗ, ಅಕ್ಕಪಕ್ಕದ ಮನೆಯವರು ಪ್ರಶ್ನಿಸಿದ್ದಾರೆ. ಈ ವೇಳೆ ಆಧಾರ್ ಕಾರ್ಡ್ ಬೇಕೆಂದು ಸುಳ್ಳು ಹೇಳಿ ಅಲ್ಲಿಂದ ಪರಾರಿಯಾಗಿದ್ದ. ಇತ್ತ ರಾಕೇಶ್ ಎಂಬ ಆರೋಪಿ ಸಂಚಾರ ಪೊಲೀಸ್ ಠಾಣೆಗೆ ತೆರಳಿ,ಪರಿಚಯಸ್ಥ ಮಹಿಳೆಗೆ ಅಪರಿಚಿತ ವಾಹನ ಡಿಕ್ಕಿ ಹೊಡೆದಿದ್ದು, ನಾನೇ ಅವರನ್ನು ಕಾಪಾಡಿ ಆಸ್ಪತ್ರೆಗೆ ಸೇರಿಸಿದ್ದೇನೆ' ಎಂದು ಸುಳ್ಳು ದೂರು ನೀಡಿದ್ದನು.

ಅಸಲಿ ಸತ್ಯ ಬಯಲು: ಮಹಿಳೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಆಕೆಯ ಮನೆಯಲ್ಲಿ ಕಳ್ಳತನಕ್ಕೆ ಯತ್ನ ನಡೆದಿರುವ ಬಗ್ಗೆ ಮನೆ ಮಾಲೀಕರು ದೂರು ನೀಡಿದ್ದರು. ಈ ದೂರನ್ನು ಗಂಭೀರವಾಗಿ ಪರಿಗಣಿಸಿದ ಮಹಾಲಕ್ಷ್ಮಿ ಲೇಔಟ್ ಪೊಲೀಸರು ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ ಅಸಲಿ ಕೃತ್ಯ ಬಯಲಾಗಿದೆ. ದುರದೃಷ್ಟವಶಾತ್, ಚಿಕಿತ್ಸೆ ಫಲಿಸದೆ ವಿಜಯಲಕ್ಷ್ಮಿ ಅವರು ಮೃತಪಟ್ಟಿದ್ದಾರೆ.

ಪ್ರಕರಣದ ಮತ್ತೊಂದು ತಿರುವು ಎಂದರೆ, ಬಂಧಿತ ಆರೋಪಿಗಳ ಪೈಕಿ ಮಂಜುನಾಥ್ ಎಂಬಾತ ಪೊಲೀಸ್ ಕಸ್ಟಡಿಯಲ್ಲಿದ್ದಾಗಲೇ ಅನಾರೋಗ್ಯದಿಂದ ಮೃತಪಟ್ಟಿದ್ದಾನೆ. ಪೊಲೀಸರು ಕೊಲೆ ಮತ್ತು ಸುಲಿಗೆ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಜೀವನ ಶೈಲಿಯಲ್ಲಿ ಬದಲಾವಣೆ ಕಾಣದಿರುವುದು ಸ್ವಯಂಕೃತ ಅಪರಾಧ

**ಕೋಲಾರ,ಮೇ,8–** ಅಧುನಿಕ ಕಾಲಘಟ್ಟದಲ್ಲೂ ಜೀವನ ಶೈಲಿಯಲ್ಲಿ ಯಾವ ಬದಲಾವಣೆ ಕಾಣದೆ ಇರುವುದು ನಮ್ಮ ಸ್ವಯಂಕೃತ ಅಪರಾಧಗಳಿಂದಾಗಿದೆ. ಪರಿಸರದ ಮುಂಜಾಗ್ರತೆಯ ಚಿಂತನೆ ಇಲ್ಲದೆ ಮನೆಗೆ ಬೆಂಕಿ ಬಿದ್ದಾಗ ನೀರಿಗಾಗಿ ಬಾವಿ ತೊಡಲು ಮುಂದಾದರಂತೆ ಎಂಬ ಗಾದೆಯ ಮಾತಿನಂತಾಗಿದೆ. ಪರಿಸರ ನಿರ್ಲಕ್ಷತೆಯ ಪಾಪ ಪ್ರಜ್ಞೆಯಾಗಿ ಕಾಡುತ್ತಿದ್ದು ನಮ್ಮಗಳದು ಭಸ್ಮಸೂರ ಪಾತ್ರದಂತಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅಭಿಪ್ರಾಯಪಟ್ಟರು.

ನಗರದ ಪತ್ರಕರ್ತರ ಭವನದಲ್ಲಿ ಮನ್ವಂತರ ಪ್ರಕಾಶನ ವತಿಯಿಂದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ವಿಜಯಾ ಉನ್ನತಿ ಸೇವಾ ಟ್ರಸ್ಟ್ ಸಹಕಾರದೊಂದಿಗೆ ಆಯೋಜಿಸಿದ್ದ ಜಾಗತಿಕ ತಾಪಮಾನ ಏರಿಕೆಯಿಂದ ಅಗುತ್ತಿರುವ ದುಷ್ಪರಿಣಾಮಗಳ ಕುರಿತು ಜನ ಜಾಗೃತಿಗಾಗಿ ಪತ್ರಕರ್ತರು. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರೊಂದಿಗೆ ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ, ಶ್ರೀಸಾಮಾನ್ಯರ ಬದುಕು ಅಧುನೀಕರಣ, ನಗರೀಕರಣವಾದರೂ ವೈಜ್ಞಾನಿಕವಾದ ರೀತಿಯಲ್ಲಿ ಅಭಿವೃದ್ಧಿಯಾಗದಿರುವುದಕ್ಕೆ ಅವಸರದ ತೀರ್ಮಾನಗಳಿಂದಾಗಿ ಪರಿಸರದ ಅಸಮಾತೋಲನಕ್ಕೆ ಕಾರಣವಾಗಿದೆ.ಸೂಕ್ಷ್ಮತೆಗಳನ್ನು ಕಳೆದು ಕೊಂಡಾಗ ಅವಘಾಡಗಳಿಗೆ ಕಾರಣವಾಗುತ್ತದೆ ಎಂದು ಹೇಳಿದರು.

ಕೆರೆಕಟ್ಟೆಗಳ ಮೂಲದಿಂದ ಕೃಷಿ ಅವಲಂಭಿತವಾಗಿತ್ತು ಅದರೆ ಈಗಾ ಕೆರೆಗಳೇ ಕಣ್ಮರೆಯಾಗಿವೆ ಎಂದು ರಾಜಧಾನಿ ಬೆಂಗಳೂರನ್ನು ಉದಾಹರಿಸಿದ ಅವರು ಪ್ರಕೃತಿಯ ವಿಕೋಪಕ್ಕೆ ತುತ್ತಾಗಿ ಹವಾಮಾನದ ಬದಲಾವಣೆಗಳಿಂದ ಕಾಲಕಾಲಕ್ಕೆ ಮಳೆಯಾಗದೆ ಜೂಜಾಟದಂತಾಗಿದೆ. ಒಂದು ಸಣ್ಣ ಮಳೆಯು ಹಲವಾರು ಜೀವಗಳನ್ನು ಬಲಿ ಪಡೆಯುತ್ತಿದೆ ಎಂದು ಇತ್ತೀಚೆನ ಘಟನೆಗಳನ್ನು ನೆನಪಿಸಿ ನೈಸರ್ಗಿಕ ಸವಾಲುಗಳನ್ನು ಎದುರಿಸುವಂತ ಸಾಮಾರ್ಥ್ಯ ಇಂದು ಮಾನವನಿಗಿಲ್ಲವಾಗಿದೆ ಎಂದು ತಿಳಿಸಿದರು.

ಮಾನವನ ದುರಾಸೆಗಳಿಂದ ನೈಸರ್ಗಿಕ ಹೊಂದಿ ಕೊಳ್ಳಲು ಸಾಧ್ಯವಿಲ್ಲ. ನೀರು



ಇರುವ ಕಡೆ ಮಾತ್ರ ಮಾನವನ ನಾಗರೀಕತೆ ಸಂಸ್ಕೃತಿಗಳು ಹುಟ್ಟಲು ಸಾಧ್ಯ ಎಂಬುವುದು ಇತಿಹಾಸವು ಸಾಕ್ಷೀಕರಿಸಿದೆ ಎಂದು ಪ್ರತಿಪಾದಿಸಿದರು.

**ಸಸಿಗಳ ವಿತರಣೆ ಫ್ಯಾಷನ್–** ನಗರದಲ್ಲಿ ನೀರಿನ ಅದಾಲತ್, ನೀರಿನ ಸೌಲಭ್ಯದ ಅಡಿಟರ್ ನಡೆಸಲು ಚಿಂತಿಸಲಾಗಿದೆ. ಅಗತ್ಯಕ್ಕಿಂತ ಹೆಚ್ಚಿನ ನೀರಿನ ಸೌಲಭ್ಯಗಳಿಂದಾಗಿ ದುರ್ಬಳಕೆಯಾಗುತ್ತಿರುವುದನ್ನು ನಿಯಂತ್ರಿಸಲು ಕ್ರಮವಹಿಸಲಾಗಿದೆ. ಸಸಿಗಳ ವಿತರಣೆ ಫ್ಯಾಷನ್ ಅಗದೆ, ಸಸಿಗಳ ನೆಡುವಿಕೆ ಪ್ರಚಾರಕ್ಕೆ ಮಾತ್ರ ಸೀಮಿತವಾಗದೆ. ಸಸಿಗಳನ್ನು ಮರಗಳಾಗಿ ಬೆಳೆಯುವಂತೆ ನಿರ್ವಹಿಸಿದಾಗ ಮಾತ್ರ ಸಾರ್ಥಕವಾಗುವುದು ಎಂದರು.

ಮಾನವನ ಜವಾಬ್ದಾರಿಯು ಹೆಚ್ಚಿನದಾಗಿದೆ.ಶಿಕ್ಷಣ ಪಡೆದವರು ಮಾತ್ರ ಜ್ಞಾನವಂತರಲ್ಲ, ಬುದ್ದಿವಂತರಲ್ಲ, ಶಿಕ್ಷಣ ಪಡೆಯದೆ ಇರುವವರಲ್ಲೂ ಪ್ರಜ್ಞಾವಂತರು. ಬುದ್ದಿವಂತರು. ಸಂಸ್ಕಾರದ ಜೂತೆಗೆ ಸಾಮಾಜಿಕ ಕಳಕಳಿ ಇರುವಂತ ಸಮಾಜಮುಖಿಗಳನ್ನು ಕಾಣಬಹುದಾಗಿದೆ ಎಂದು ಹೇಳಿದರು.

# ಅಪಾರ ಭಕ್ತವೃಂದ ಹೊಂದಿರುವ ಮೃತ್ಯುಂಜಯ ಶ್ರೀ




**ನವಲಗುಂದ,ಮೇ8:** ನಾಡಿನೆಲ್ಲೆಡೆ ಆಧ್ಯಾತ್ಮ ಪ್ರವಚನ ಮೂಲಕ ಭಕ್ತ ಸಮೂಹದಲ್ಲಿ ಸನ್ಮಾರ್ಗದ ಸಂದೇಶಗಳನ್ನು ನೀಡುವುದರೊಂದಿಗೆ ಅಪಾರ ಭಕ್ತ ವೃಂದವನ್ನು ಹೊಂದಿರುವ ಮಣಕವಾಡ ಗ್ರಾಮದ ಅಭಿನವ ಶ್ರೀ ಮೃತ್ಯುಂಜಯ ಸ್ವಾಮಿಗಳು ಪ್ರವಚಣ ಮಾಣಿಕ್ಯರೆಂಬ ಖ್ಯಾತಿ ಗಳಿಸಿದ್ದಾರೆಂದು ಪಂಚಗ್ರಹ ಹಿರೇಮಠದ ಶ್ರೀ ಸಿದೇಶ್ವರ ಶಿವಾಚಾರ್ಯ ಸ್ವಾಮಿಜಿ ನುಡಿದರು

ಅವರು ಪಂಚಗ್ರಹ ಹಿರೇಮಠದ ಗುರುಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ಆಯೋಜಿಸಿದ 11 ದಿನಗಳ ನಿರಂತರ ಪ್ರವಚನ ಕಾರ್ಯಕ್ರಮದಲ್ಲಿ ಮಣಕವಾಡ ಶ್ರೀ ಮೃತ್ಯುಂಜಯ ಸ್ವಾಮಿಗಳ ಜನ್ಮ ದಿನಾಚಣೆಯ ಸಾನ್ನಿಧ್ಯ ವಹಿಸಿ ಮಾತನಾಡಿದರು.
ಗವಿಮಠದ ಶ್ರೀ ಬಸವಲಿಂಗಸ್ವಾಮಿಜಿ ಮಾತನಾಡಿ ಮಣಕವಾಡ ಶ್ರೀಗಳು ಗುರು ಪಟ್ಟಾಧಿಕಾರ ಮಹೋತ್ಸವ ಅಂಗವಾಗ ನಿರಂತರ 11 ದಿನಗಳ ಪ್ರವಚನವನ್ನು ಹೇಳುವ ಮೂಲಕ ಪಟ್ಟಣದ ಭಕ್ತರಲ್ಲಿ ಆಧ್ಯಾತ್ಮಿಕ ಚಿಂತನೆಯಲ್ಲಿ ತೊಡಗಿಸಿ ಆಧ್ಯಾತ್ಮ ಜ್ಞಾನ ಬಿತ್ತರುಸುತ್ತಿರುವುದ ಭಕ್ತರಲ್ಲಿ ಹರ್ಷವನ್ನುಂಟು ಮಾಡಿದೆ ಎಂದರು.

ಶಾಸಕ ಎನ್,ಎಚ್,ಕೋನರಡ್ಡಿ ಮಾತನಾಡಿ ಕಳೆದ 6 ದಿನಗಳಿಂದ ಮಣಕವಾಡ ಶ್ರೀಗಳು ಪಟ್ಟಣದಲ್ಲಿ ಪ್ರವಚನ ಆರಂಭಿಸಿದಾಗಿನಿಂದ ಸಾವಿರಾರು ಜನ ಪ್ರವಚನ ಆಲಿಸಲು ಬರುತ್ತಿರುವುದು ಜನತೆಲ್ಲಿರು ಆಧ್ಯಾತ್ಮತ ಹಸಿವಿಗೆ ಸಾಕ್ಷಿಯಾಗಿದೆ ಎಂದರು.

ಹಿರೇಮಠದ ನಿಯೋಜಿತ ಪಿಠಾಧೀಕಾರಿ ಶ್ರೀ ವೀರಬಸವ ದೇವರು, ಹಿರಿಯರಾದ ಅಣ್ಣಪ್ಪ ಬಾಗಿ,ಸಿದ್ದಲಿಂಗಯ್ಯ ಹಿರೇಮಠ, ಎಂ,ಡಿ,ಕುಲಕರ್ಣಿ,ಶ್ರೀಶೈಲ ಮೂಲಿಮನಿ,ಗಂಗಪ್ಪ ಹಳ್ಳದ ,ಪಾಂಡಪ್ಪ ಕೋನರಡ್ಡಿ,ಮಲ್ಲಿಕಾರ್ಜುನ ಜಲಾದಿ,ಯಲ್ಲಪ್ಪ ಭೋವಿ, ಅಪ್ಪಣ್ಣ ಹಳ್ಳದ, ಬಸವರಾಜ ಈಟಿ,ಸಿದ್ದಲಿಂಗಪ್ಪ ಹಳ್ಳದ,ಎ.ಬಿ.ಕೊಪ್ಪದ,ಆರ್,ಎಸ್,ನೇಗಲಿ ಸೇರಿದಂತೆ ಸಾವಿರಾರ ಭಕ್ತರು ಉಪಸ್ಥಿತರಿದ್ದರು.

# ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಖರೀದಿ



**ಬೆಂಗಳೂರು, ಮೇ. 8–** ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ 2025–26ನೇ ಸಾಲಿನ ಹಿಂಗಾರು ಹಂಗಾಮಿನ ಸೂರ್ಯಕಾಂತಿಯನ್ನು ಪ್ರತಿ ಕ್ವಿಂಟಾಲ್‌ಗೆ 7,721 ರೂ. ದರದಲ್ಲಿ ಖರೀದಿಗೆ ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಆದೇಶ ಮಾಡಿದ್ದಾರೆ.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳ ಅನ್ವಯ ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ವಿಜಯಪುರ, ಚಾಮರಾಜನಗರ, ಚಿತ್ರದುರ್ಗ, ಗದಗ, ಕಲಬುರಗಿ, ವಿಜಯನಗರ, ರಾಯಚೂರು ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಅವಶ್ಯಕತೆಗೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ದೇಶನ ನೀಡಿದ್ದಾರೆ.

ನಾಫೆಡ್ ಮತ್ತು ಎನ್‌ಸಿಸಿಎಫ್ ಸಂಸ್ಥೆಗಳನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ಹಾಗೂ ಕರ್ನಾಟಕ ಸಹಕಾರಿ ಎಣ್ಣೆಬೀಜ ಬೆಳೆಗಾರರ ಮಹಾಮಂಡಳವನ್ನು ರಾಜ್ಯ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ನೇಮಕ ಮಾಡಲಾಗಿದೆ.
ನೋಂದಣಿ ಅವಧಿಯನ್ನು 50 ದಿನ ಹಾಗೂ ಖರೀದಿ ಅವಧಿಯನ್ನು 60 ದಿನ ನಿಗದಿಪಡಿಸಲಾಗಿದ್ದು, ನೋಂದಣಿ ಜೊತೆಗೆ ಖರೀದಿ ಪ್ರಕ್ರಿಯೆ ಆರಂಭಿಸಬೇಕು ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಗೋದಾಮುಗಳನ್ನು ಹೊಂದಿರುವ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಂಡು ಖರೀದಿ ಕೇಂದ್ರಗಳನ್ನು ತೆರೆಯಬೇಕು . ನೋಂದಣಿ ಮತ್ತು ಖರೀದಿಯಲ್ಲಿ ಯಾವುದೇ ಸಮಸ್ಯೆಗಳಾಗದಂತೆ ಸಿದ್ದತೆ ಮಾಡಿಕೊಂಡು ಪ್ರಕ್ರಿಯೆ ಆರಂಭಿಸಬೇಕು ಎಂದು ಸೂಚಿಸಿದ್ದಾರೆ.
ರೈತರ ಹೆಸರಿನಲ್ಲಿ ವರ್ತಕರು ಮತ್ತು ಖರೀದಿ ಸಂಸ್ಥೆಗಳು ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ದುರ್ಬಳಕೆ ಮಾಡಿಕೊಳ್ಳಲು ಅವಕಾಶ ನೀಡಬಾರದು. ಖರೀದಿ ಪ್ರಗತಿಯ ವಿವರವನ್ನು ಪ್ರತಿ ದಿನ ರಾಜ್ಯ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಒದಗಿಸಬೇಕು ಎಂದು ತಿಳಿಸಿದ್ದಾರೆ.

# ಪ್ರಗತಿ ಪರಿಶೀಲನಾ ಸಭೆ



**ನವಲಗುಂದ,ಮೇ.8**: ಮುಂಗಾರು ಹಂಗಾಮಿನಲ್ಲಿ ರೈತರ ಬಿತ್ತನೆ ಕಾರ್ಯಕ್ಕೆ ತೊಂದರೆಯಾಗದಂತೆ ಕೃಷಿ ಇಲಾಖೆ ಸಕಲ ಸಿದ್ಧತೆ ಮಾಡಿಕೊಳ್ಳಬೇಕು. ರೈತರಿಗೆ ಗುಣಮಟ್ಟದ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳನ್ನು ನಿಗದಿತ ದರದಲ್ಲಿ ಪೂರೈಸಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ಶಾಸಕ ಎನ್ ಎಚ್ ಕೋನರಡ್ಡಿ ಸೂಚನೆ ನೀಡಿದರು.

ಪಟ್ಟಣದ ವಾಲ್ಮೀಕಿ ಸಭಾಭವನದಲ್ಲಿ ನವಲಗುಂದ, ಅಣ್ಣಿಗೇರಿ ಮತ್ತು ಹುಬ್ಬಳ್ಳಿ ತಾಲ್ಲೂಕಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆವಹಿಸಿ ಮಾತನಾಡಿದರು.
ನವಲಗುಂದ ಅಣ್ಣಿಗೇರಿ ಪಟ್ಟಣವೂ ಸೇರಿದಂತೆ ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಕೆರೆಗಳಿಗೆ ಮಲಪ್ರಭಾ ಕಾಲುವೆ ನೀರನ್ನು ತುಂಬಿಸಿ ತೊಂದರೆಯಾಗದ ರೀತಿ ಆಯಾ ಭಾಗದ ಅಧಿಕಾರಿಗಳು ಎಚ್ಚರ ವಹಿಸಬೇಕು. ಬೇಸಿಗೆ ಇರುವುದರಿಂದ ನೀರಿನ ಅಭಾವವಾಗದಂತೆ ಕೂಡಲೇ ಅಗತ್ಯ ಮುನ್ನೆಚ್ಚರಿಕಾ ಕ್ರಮಕೈಗೊಳ್ಳಬೇಕು ಎಂದು ನಿರ್ದೇಶಿಸಿದರು.
ತಾಲ್ಲೂಕಿನಾದ್ಯಂತ ಅಕ್ರಮ ಸಾರಾಯಿ ದಂಧೆ ಬಗ್ಗೆ ಶಾಸಕರು ತಾಲೂಕ ಅಬಕಾರಿ ನಿರೀಕ್ಷಕರಿಂದ ಮಾಹಿತಿ ಪಡೆದು ಇದಕ್ಕೆ ಸಂಪೂರ್ಣ ಕಡಿವಾಣ ಹಾಕಬೇಕು ಎಂದು ತಿಳಿ ಹೇಳಿದರು.

ತಹಶೀಲ್ದಾರರಾದ ಸುಧೀರ ಸಾಹುಕಾರ, ಮಂಜುನಾಥ ದಾಸಪ್ಪನವರ, ಜೆ.ಬಿ. ಮಜ್ಜಗಿ, ತಾ.ಪಂ. ಇಒ ರವೀಂದ್ರಗೌಡ ಪಾಟೀಲ, ಆರ್. ಎಂ. ಹೊಸಮನಿ, ಸಿಪಿಐ ರವಿ ಕಪ್ಪತ್ತನವರ, ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ವರ್ಧಮಾನಗೌಡ ಹಿರೇಗೌಡ್ರ, ಶಿವಾನಂದ ಭೂಮಣ್ಣವರ, ಡಿಡಿಪಿಐ ಉಮೇಶ ಬೊಮ್ಮಕ್ಕನವರ, ಸೋಮನಗೌಡ ಪಾಟೀಲ, ರಾಘವೇಂದ್ರ ಜಾಲಗಾರ,ಮನೋಹರ ದ್ಯಾಬೇರಿ, ಗಾಯತ್ರಿ ಪಾಟೀಲ ಡಾ. ಎನ್ ಬಿ ಕಾಲವಾಡ, ಎಸ್ ಎಸ್ ಲಂಗೂಟಿ, ಎಸ್.ಪಿ. ಪೂಜಾರ, ವಾಯ್.ಜಿ. ಗದ್ದಿಗೌಡರ, ಅಬೀದಾ ಮುಲ್ಲಾನವರ ಸೇರಿದಂತೆ ತಾಲ್ಲೂಕಾ ಕೆಡಿಪಿ ನಾಮನಿರ್ದೇಶಿತ ಸದಸ್ಯರು, ನವಲಗುಂದ, ಅಣ್ಣಿಗೇರಿ, ಹುಬ್ಬಳ್ಳಿ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

# ಐಪಿಎಲ್ ಸ್ಥಳಾಂತರ: ಸರ್ಕಾರಕ್ಕೆ ಸಂಬಂಧವಿಲ್ಲ




**ಬೆಂಗಳೂರು, ಮೇ 8–** ಬೆಂಗಳೂರಿನಿಂದ ಐಪಿಎಲ್ ಕ್ರಿಕೆಟ್ ಫೈನಲ್ ಪಂದ್ಯ ಸ್ಥಳಾಂತರಕ್ಕೂ ರಾಜ್ಯ ಸರ್ಕಾರಕ್ಕೂ ಯಾವುದೇ ಸಂಬಂಧ ಇಲ್ಲ. ಅಹಮದಾಬಾದ್‌ನಲ್ಲಿ ಹೆಚ್ಚು ಆಸನಗಳ ವ್ಯವಸ್ಥೆ ಇದೆ ಎಂದು ಸ್ಥಳಾಂತರ ಮಾಡಿರಬಹುದು ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ್ ಹೇಳಿದರು.
ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿನ್ನಸ್ವಾಮಿ ಕ್ರಿಡಾಂಗಣದಿಂದ ಐಪಿಎಲ್ ಫೈನಲ್ ಪಂದ್ಯ ವರ್ಗಾವಣೆ ಮಾಡಿರುವ ವಿಚಾರಣೆ ಬಿಸಿಸಿಐ ಆರ್‌ಸಿಬಿಗೆ ಬಿಟ್ಟದ್ದು ನಮಗೂ ಅದಕ್ಕೂ ಸಂಬಂಧ ಇಲ್ಲ. ಅವರ ಒಪ್ಪಂದ ನಮಗೇನೂ ಗೊತ್ತಿಲ್ಲ ಎಂದರು.
ಈ ಪಂದ್ಯಾವಳಿಗಳನ್ನು ವಾಣಿಜ್ಯ ದೃಷ್ಟಿಕೋನದಲ್ಲಿ ನೋಡಿದ್ದಾರೆ. ಆ ಕಾರಣಕ್ಕೆ ಸ್ಥಳಾಂತರ ಆಗಿರಬಹುದು. ಭದ್ರತೆ ಸೇರಿದಂತೆ ಬೇರೆ ಯಾವ ವಿಚಾರದಲ್ಲೂ ಕೊರತೆಯಾಗದಂತೆ ನಾವು ಕ್ರಮ ಕೈಗೊಂಡಿದ್ದೇವೆ. ಕಡಿಮೆ ಸಮಯದಲ್ಲಿ ಭದ್ರತೆ ವ್ಯವಸ್ಥೆ ಮಾಡಿ ನ್ಯಾ. ಖುನ್ನಾ ವರದಿಯಂತೆ ಕ್ರಮಗಳನ್ನು ಕೈಗೊಂಡಿದ್ದೇವೆ ಎಂದು ಸ್ಪಷ್ಟಪಡಿಸಿದರು
ರಾಜ್ಯದ ಶಾಸಕರು ಟಿಕೆಟ್ ಬೇಡಿಕೆ ಹೆಚ್ಚಿದ್ದರಿಂದ ಫೈನಲ್ ಪಂದ್ಯಾ ಸ್ಥಳಾಂತರವಾಗಿದೆ ಎಂಬ ವರದಿಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹಾಗೆನಾದರೂ ಇದ್ದರೆ ಅದನ್ನು ಕ್ರಿಕೆಟ್ ಸಂಸ್ಥೆಯವರು ಹೇಳಬೇಕು. ಯಾರ್ಯಾರು ಎಷ್ಟು ಟಿಕೆಟ್ ತೆಗೆದಿದ್ದಾರೆ ಬಹಿರಂಗಪಡಿಸಲಿ ಎಂದರು

ಆರ್‌ಸಿಬಿ ಅಭಿಮಾನಿಗಳಿಗೆ ಸರ್ಕಾರದಿಂದ ಮೋಸ ಆಗಿದೆ ಎಂಬ ವಿಪಕ್ಷಗಳ ಆರೋಪ ಸರಿಯಲ್ಲ. ಬಿಜೆಪಿ– ಜೆಡಿಎಸ್ ಕ್ರೀಡೆಗೆ ಏನು ಸಹಕಾರ ಕೊಟ್ಟಿದೆ ಎಂಬುದು ಗೊತ್ತಿದೆ. ಸುಮ್ಮನೆ ಆರೋಪ ಮಾಡುವುದು ತರವಲ್ಲ ಎಂದು ಗರಂ ಆಗಿ ಹೇಳಿದರು
ತಮಿಳುನಾಡಿನಲ್ಲಿ ಸರ್ಕಾರ ರಚನೆ ವಿಳಂಬವಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸಂವಿಧಾನದಲ್ಲಿ ಕೆಲವು ಅಂಶಗಳಿವೆ. ಅದನ್ನು ರಾಜ್ಯಪಾಲರು ನೋಡುತ್ತಾರೆ ಕಾನೂನಿನಲ್ಲಿ ಏನಿದೆ ಎಂಬುದನ್ನು ನೋಡಿ ಕ್ರಮ ವಹಿಸುತ್ತಾರೆ. ಟಿವಿಕೆ ಪಕ್ಷದವರು ನ್ಯಾಯಾಲಯದ ಕದ ತಟ್ಟಬಹುದು ಎಂದು ಪರಮೇಶ್ವರ್ ಹೇಳಿದರು

# ಪೀಣ್ಯ ಫ್ಲೈಓವರ್ ಸಂಚಾರಕ್ಕೆ ಮುಕ್ತ

**ಬೆಂಗಳೂರು,ಮೇ.8–**ಕೇಬಲ್ ಅಳವಡಿಕೆ ದುರಸ್ತಿ ಹಾಗೂ ಲೋಡ್ ಟೆಸ್ಟ್ ನಡೆಸುವ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಬಂದ್ ಮಾಡಲಾಗಿದ್ದ ಪೀಣ್ಯ ರಾಷ್ಟ್ರೀಯ ಹೆದ್ದಾರಿ–4 ರ ಪೀಣ್ಯ ಎಲಿವೇಟೆಡ್ ಪ್ಲೈಓವರ್ (ಡಾ. ಶ್ರೀ ಶಿವಕುಮಾರ ಸ್ವಾಮೀಜಿ ಮೇಲ್ಸೇತುವೆ)ರಸ್ತೆಯನ್ನು ಇಂದಿನಿಂದ ವಾಹನಗಳ ಸಂಚಾರಕ್ಕೆ ಮುಕ್ತವಾಗಿದೆ.ಕೇಬಲ್ ಅಳವಡಿಕೆ ದುರಸ್ತಿ ಹಾಗೂ ಲೋಡ್ ಟೆಸ್ಟ್ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಪೀಣ್ಯ ಎಲಿವೇಟೆಡ್ ಪ್ಲೈಓವರ್ ರಸ್ತೆಯನ್ನು ಸಂಚಾರಕ್ಕೆ ಮುಕ್ತವಾಗಿದ್ದು,ರಾಜ್ಯದ 22 ಜಿಲ್ಲೆಗಳನ್ನು ಸಂಪರ್ಕಿಸುವ ವಾಹನ ಚಾಲಕರು ಪ್ರಯಾಣಿಕರು ನಿಟ್ಟುಸಿರು ಬಿಡುವಂತಾಗಿದೆ.
ಪೀಣ್ಯ ಎಲಿವೇಟೆಡ್ ಪ್ಲೈಓವರ್ ರಸ್ತೆಯನ್ನು ತಾತ್ಕಾಲಿಕ ಬಂದ್ ಮಾಡಿದ್ದಾಗ ನಾಲ್ಕೈದು ಕಿಮೀ ಸಂಚಾರ ದಟ್ಟಣೆ ಉಂಟಾಗಿ ಗಂಟೆಗಟ್ಟಲೇ ವಾಹನಗಳು ಸಿಲುಕಿ ಪರದಾಡುವಂತಾದ ಪರಿಸ್ಥಿತಿ ನಿವಾರಣೆಯಾಗಿದೆ.ಪೀಣ್ಯ ಎಲಿವೇಟೆಡ್ ಪ್ಲೈಓವರ್ ರಸ್ತೆಯು ಮತ್ತೆ ಸಹಜ ಸ್ಥಿತಿಗೆ ಮರಳಿದೆ. ಫ್ಲೈಓವರ್ ಬಂದ್ ಆಗಿದ್ದ ಹಿನ್ನೆಲೆ ಟ್ರಾಫಿಕ್ ಸಮಸ್ಯೆ ಎದುರಿಸುತ್ತಿದ್ದ ವಾಹನ ಸವಾರರು ಈಗ ನಿರಾಳರಾಗಿದ್ದಾರೆ.ತಾತ್ಕಾಲಿಕ ಬಂದ್ ಆಗಿದ್ದ ಪ್ಲೈಓವರ್ ರಸ್ತೆಯು ಸುಮಾರು 72 ಗಂಟೆಗಳ ಬಳಿಕ ಸಂಚಾರಕ್ಕೆ ಮುಕ್ತವಾಗಿದೆ.ಕಳೆದ ಮೇ.5 ಮುಂಜಾನೆ 5 ಗಂಟೆಗೆ ಕ್ಲೋಸ್ ಆಗಿದ್ದ ಫ್ಲೈಓವರ್ 72 ಗಂಟೆಗಳ ಬಳಿಕ ಅಂದರೆ ಇಂದು ಬೆಳಿಗ್ಗೆ 11 ಗಂಟೆಗೆ ಮತ್ತೆ ವಾಹನಗಳ ಸಂಚಾರಕ್ಕೆ ಮುಕ್ತಗೊಂಡಿದೆ.
1,422 ಕೇಬಲ್ ಬದಲು:ಈ ಬಾರಿ 1,422 ಕೇಬಲ್‌ಗಳನ್ನು ಚೇಂಜ್ ಮಾಡಲಾಗಿದ್ದು, 4 ದಿನಗಳ ಕಾಲ 32 ಟನ್ ಲೋಡ್



ಟೆಸ್ಟಿಂಗ್ ನಡೆಸಲಾಗಿದೆ. ಸುಮಾರು 10ಕ್ಕೂ ಹೆಚ್ಚು ಟ್ರಕ್‌ಗಳಲ್ಲಿ 32 ಟನ್‌ನಷ್ಟು ಲೋಡ್ ಹಾಕಿ ಪರೀಕ್ಷೆ ನಡೆದಿದ್ದು, ಬದಲಾಯಿಸಲಾದ ಕೇಬಲ್‌ಗಳ ಮೊತ್ತ 32 ಕೋಟಿ ರೂ ಎನ್ನಲಾಗಿದೆ. ಜೊತೆಗೆ ಮುಂದಿನ ದಿನಗಳಲ್ಲಿ ಈ ಕೇಬಲ್‌ಗಳಿಗೆ ಯಾವುದೇ ಹಾನಿಯಾಗದಂತೆ ಅಗತ್ಯ ಮುಂಜಾಗೃತಾ ಕ್ರಮಗಳನ್ನೂ ಎನ್ ಹೆಚ್ ಎಐ ಕೈಗೊಂಡಿದೆ.ಪೀಣ್ಯ ಮೇಲ್ಸೇತುವೆಯ ಕೆನ್ನಮೆಟಲ್ ವಿಡಿಯಾ ಅಪ್ ರ್‍ಯಾಂಪ್‌ನಿಂದ ಎಸ್‌ಆರ್‌ಎಸ್ ಡೌನ್ ರ್‍ಯಾಂಪ್‌ವರೆಗೆ ಎರಡೂ ಬದಿಯಲ್ಲಿ ವಾಹನ ಸಂಚಾರಕ್ಕೆ ಮೇ 5ರಿಂದ ಅವಕಾಶವಿರಲಿಲ್ಲ.ಇಂದು ಮೇಲ್ಸೇತುವೆ ಸಂಚಾರಕ್ಕೆ ಮುಕ್ತವಾಗುತ್ತಿದ್ದಂತೆ ಸವಾರರು ನಾ ಮುಂದು ತಾ ಮುಂದು ವಾಹನಗಳನ್ನು ಚಲಾಯಿಸಿದ ದೃಶ್ಯಗಳು ಕಂಡುಬಂದಿವೆ. ಫ್ಲೈ ಓವರ್ ವಾಹನಗಳ ಸಂಚಾರಕ್ಕೆ ಮತ್ತೆ ಮುಕ್ತವಾಗಿರುವ ಕಾರಣ ಟ್ರಾಫಿಕ್ ಸಮಸ್ಯೆ ತುಂಬಾ ಕಡಿಮೆ ಆಗಲಿದೆ ಎಂದು ವಾಹನ ಸವಾರರು ಸಂತಸವನ್ನೂ ವ್ಯಕ್ತಪಡಿಸಿದ್ದಾರೆ.

# ಸಮಾರೋಪ ಸಮಾರಂಭ




**ಧಾರವಾಡ, ಮೇ 8:** ಚಿತ್ರಕಲಾ ಶಿಲ್ಪಿ ಶ್ರೀ. ಡಿ.ವ್ಹಿ. ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ವತಿಯಿಂದ ಮಕ್ಕಳ ಬೇಸಿಗೆ ಶಿಬಿರ–2026 ನ್ನು ಒಂದು ತಿಂಗಳವರೆಗೆ ಆಯೋಜಿಸಿದ್ದು, ಸಮಾರೋಪ ಸಮಾರಂಭ ನಡೆಯಿತು.
ಚಿತ್ರಕಲಾ ಶಿಲ್ಪಿ ಶ್ರೀ ಡಿ.ವ್ಹಿ. ಹಾಲಭಾವಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ, ದೀಪ ಬೆಳಗಿಸುವುದರ ಮೂಲಕ ಸಮಾರೋಪ ಕಾರ್ಯಕ್ರಮದ ಉದ್ಘಾಟನೆ ಮಾಡಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಖ್ಯಾತ ಕಲಾವಿದ ವಿಜಯ ರಾಮಚಂದ್ರ ದೊಂಗಡೆ ಅವರು ಮಾತನಾಡುತ್ತಾ, ಚಿಕ್ಕ ಮಕ್ಕಳಿಗಾಗಿ ಇಂತಹ ಕಾರ್ಯಕ್ರಮ ಮತ್ತು ಶಿಬಿರಗಳನ್ನು ಮೇಲಿಂದ ಮೇಲೆ ಆಯೋಜಿಸಬೇಕು ಅದರ ಜೊತೆಗೆ ಪಾಲಕರು ಕೂಡ ಮಕ್ಕಳಲ್ಲಿರುವ ಕಲೆಯನ್ನು ಹೊರತರುವ ನಿಟ್ಟಿನಲ್ಲಿ ಪ್ರೋತ್ಸಾಹಿಸಬೇಕು ಎಂದು ಹೇಳಿದರು. ಮನೆಯವರಿಂದ ಮಕ್ಕಳಿಗೆ ದಿನನಿತ್ಯ ಅಭ್ಯಾಸದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ತೊಡಗಿಸಬೇಕು ಎಂದರು.

ಶಿಬಿರದ ಶಿಕ್ಷಕರಾದ ಮಾಧವಿ ಅವರು ಮಾತನಾಡುತ್ತಾ ಶಿಬಿರದಲ್ಲಿ ಚಿತ್ರವನ್ನು ರಚಿಸಲು ಬೇಕಾಗುವ ಸಾಮಗ್ರಿಗಳನ್ನು ಟ್ರಸ್ಟ್ ವತಿಯಿಂದ ಪೂರೈಸಿದ್ದು, ಇದು ಮಕ್ಕಳಲ್ಲಿ ಏಕರೂಪತೆ ಮೂಡಿಸಿತು ಮತ್ತು ಮಕ್ಕಳನ್ನು ಶಿಬಿರಕ್ಕೆ ಕಳಿಸುವಲ್ಲಿ ಪಾಲಕರ ಆಸಕ್ತಿ ಬಗ್ಗೆ ಮೆಚ್ಚಿ ಮಾತನಾಡಿದರು.

ಟ್ರಸ್ಟಿನ ಅಧ್ಯಕ್ಷ ಬಿ ಮಾರುತಿ ಅವರು ಶ್ರೀ ಡಿ.ವ್ಹಿ. ಹಾಲಭಾವಿ ಅವರಿಗೆ ಇದ್ದಂತಹ ಕಲಾಸಕ್ತಿಯ ಕುರಿತಾದ ಚಿಂತನೆಯನ್ನು ವಿವರಿಸುತ್ತಾ, ಅವರ ಅನಿಸಿಕೆಗಳನ್ನು ಸಾದರ ಪಡಿಸುವ ನಿಟ್ಟಿನಲ್ಲಿ ಹಲವು ಕಾರ್ಯಕ್ರಮಗಳು ಮತ್ತು ಶಿಬಿರವನ್ನು ಪ್ರತಿ ವರ್ಗ ಆಯೋಜಿಸುತ್ತಾ ಬಂದಿದೆ. ಈ ಶಿಬಿರದಲ್ಲಿ ಎಲ್ಲ ಮಕ್ಕಳು ತುಂಬಾ ಆಸಕ್ತಿಯಿಂದ ಚಿತ್ರವನ್ನು ರಚಿಸಿ ಶಿಬಿರವನ್ನು ಯಶಸ್ವಿಗೊಳಿಸಿದ್ದಾರೆ. ಇದೆ ರೀತಿ ಮುಂದಿನ ವರ್ಗವೂ ಸಹ ಶಿಬಿರದಲ್ಲಿ ಮಕ್ಕಳು ಭಾಗವಹಿಸಬೇಕೆಂದು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು.

ಶಿಬಿರದಲ್ಲಿ ಭಾಗವಹಿಸಿದ ಶಿಬಿರಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಾಗೂ ಶಿಬಿರದಿಂದ ತಮಗಾದ ಅನುಭವಗಳನ್ನು ಹಂಚಿಕೊಂಡರು. ಶಿಬಿರದಲ್ಲಿ ಭಾಗವಹಿಸಿದ ಎಲ್ಲ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ಅತಿಥಿ–ಗಣ್ಯರು ಹಾಗೂ ಟ್ರಸ್ಟ್ ಸದಸ್ಯರು ಪ್ರದಾನ ಮಾಡಿದರು.

ಸುರೇಶ ಹಾಲಭಾವಿ ಅವರು ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಹಾಲಭಾವಿ ಟ್ರಸ್ಟ್ ಕಾರ್ಯಕ್ರಮಗಳ ಕುರಿತು ತಿಳಿಸಿದರು. ಕಾರ್ಯಕ್ರಮದಲ್ಲಿ ಡಾ. ಬಿ.ಎಚ್.ಕುರಿಯವರ ಅವರು ಸ್ವಾಗತಿಸಿದರು. ಎಫ್. ವ್ಹಿ. ಚಿಕ್ಕಮಠ ನಿರೂಪಿಸಿದರು. ಮತ್ತು ಡಿ. ಎಂ. ಬಡಿಗೇರ್ ಅವರು ವಂದಿಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟಿನ ಸದಸ್ಯ ಕಾರ್ಯದರ್ಶಿ ಕುಮಾರ ಬೆಕ್ಕೇರಿ, ಎಸ್.ಕೆ ಪತ್ತಾರ, ಶಿಬಿರದ ಶಿಕ್ಷಕರಾದ ಸುಹಾನಿ ದುಂದುರ್, ಎ.ಜಿ.ಮಾಧವಿ ಹಾಗೂ ಹಿರಿಯ ಕಲಾವಿದರು ಹಾಗೂ ಕಲಾಸಕ್ತರು ಹಾಗೂ ಪೋ?ಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE